ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

DAIRYADA DAARI NEWS PAPER

EMAIL : dairyadadaari@gmail.com ಸಂಪುಟ: 01 ಸಂಚಿಕೆ: 86

ಬೆಲೆ ರೂ : 2.00

ರಾಯಚೂರು

ಪುಟ: 4

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795

ಮಂಗಳವಾರ: 10-03-2026


SEHRI & IFTARI TIME
DAY :TUESDAY
RAMZAN : 20
DATE: 10.03.2026
END TIME OF SEHRI :5:18 AM
FAJAR AZAAN : 5:23 AM

IFTAR TIME : 6:32 PM

ಸೈಯದ್ ಅಹ್ಮದ್ ಹುಸೇನಿ ಮತ್ ವಾಲೆ
ಕಾರ್ಯದರ್ಶಿಗಳು : ಮತ್ ವಾಲೆ
ಸಾಹೇಬ್ ಪಬ್ಲಿಕ್ ಸ್ಕೂಲ್ ಮಾನ್ವಿ
ಸಂಪಾದಕರು : ಧೈರ್ಯದ ದಾರಿ ಕನ್ನಡ
ದಿನಪತ್ರಿಕೆ




ಸುದ್ದಿ ಮತ್ತು
ಜಾಹೀರಾತಿಗಾಗಿ
ಸಂಪರ್ಕಿಸಿ
6360866626


# ಸರ್ಕಾರಿ ಆಸ್ಪತ್ರೆಗಳಿಗೆ 880 ಕೋಟಿ ರೂ. ವೆಚ್ಚದಲ್ಲಿ ಔಷಧಿ ಖರೀದಿಗೆ ಅಸ್ತು : ಸಚಿವ ಗುಂಡೂರಾವ್

**ಬೆಂಗಳೂರು,ಮಾ.9–** ಪ್ರಾಥಮಿಕ ಆರೋಗ್ಯ ಕೇಂದ್ರ, ಸಮುದಾಯ ಆರೋಗ್ಯ ಕೇಂದ್ರ, ತಾಲ್ಲೂಕು ಮತ್ತು ಜಿಲ್ಲಾ ಆಸ್ಪತ್ರೆ ಹಾಗೂ ಇತರ ಸರ್ಕಾರಿ ಸಂಸ್ಥೆಗಳಿಗೆ ಅಗತ್ಯವಿರುವ 890 ವಿಧಗಳ ಔಷಧಿಗಳನ್ನು 880.68 ಕೋಟಿ ರೂ. ಮೊತ್ತದಲ್ಲಿ ಖರೀದಿಸಲು ಅನುಮೋದನೆ ನೀಡಲಾಗಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್‌ಗುಂಡೂರಾವ್ ವಿಧಾನಪರಿಷತ್‌ಗೆ ತಿಳಿಸಿದರು.

ಪ್ರಶ್ನೋತ್ತರ ವೇಳೆಯಲ್ಲಿ ಶಾಸಕರಾದ ಡಾ.ಧನಂಜಯ ಸರ್ಜಿ ಹಾಗೂ ಪ್ರತಾಪ ಸಿಂಹ ನಾಯಕ್ ಕೆ. ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಔಷಧಗಳನ್ನು ಖರೀದಿಸಲು ಕೆಎಸ್‌ಎಂಎಸ್‌ಸಿಎಲ್ ಸಂಸ್ಥೆಗೆ ಅನುಮೋದನೆ ನೀಡಲಾಗಿದೆ. ಔಷಧಿ ಖರೀದಿಯನ್ನು ಪಾರದರ್ಶಕವಾಗಿ ಟೆಂಡರ್ ಕರೆದು ಮಾಡಲಾಗುತ್ತಿದೆ. ಹೆಚ್ಚು ಬಿಡ್‌ದಾರರು ಭಾಗವಹಿಸಲು ಅವಕಾಶವಾಗುವಂತೆ ಟೆಂಡರ್ ಷರತ್ತುಗಳನ್ನು ವಿಧಿಸಲಾಗಿದೆ ಎಂದರು.

ಔಷಧ ಸರಬರಾಜು ಮಾಡುವ ಮುನ್ನವೇ ಗುಣಮಟ್ಟದ ಪರೀಕ್ಷೆ ಮಾಡಲಾಗುವುದು. ಕೊರತೆ ಇರುವ ಔಷಧಗಳನ್ನು ತಾತ್ಕಾಲಿಕವಾಗಿ ಖರೀದಿಸಲು ಕ್ರಮ ಕೈಗೊಳ್ಳಲಾಗಿದೆ. ವಾರ್ಷಿಕ ಔಷಧಿ ಖರೀದಿ ಬದಲು 3 ರಿಂದ 4 ತಿಂಗಳಿಗೊಮೆ ಅಗತ್ಯವಿರುವ ಔಷಧಿ ಖರೀದಿ ಮಾಡಲಾಗುತ್ತಿದೆ.



ಇದರಿಂದ ಅವಧಿ ಮುಗಿಯುವ ಔಷಧಿಗಳ ಸಂಖ್ಯೆ ತಪ್ಪಲಿದೆ. 232 ಕೋಟಿ ರೂ.ಗಳಷ್ಟು ಔಷಧಿಗಳನ್ನು ಒದಗಿಸಲಾಗಿದೆ. ಈ ತಿಂಗಳು, ಮುಂದಿನ ತಿಂಗಳು ಸರಬರಾಜು ಆಗಲಿದೆ ಎಂದು ಮಾಹಿತಿ ನೀಡಿದರು. 2025-26ನೇ ಸಾಲಿನಲ್ಲಿ ಕೆಎಸ್‌ಎಂಎಸ್‌ಸಿಎಲ್ ಸಂಸ್ಥೆಯಿಂದ 534 ಔಷಧಿಗಳಲ್ಲಿ ಆದ್ಯತೆ ಮೇಲೆ 496 ಔಷಧಿಗಳ ಖರೀದಿ ಪ್ರಕ್ರಿಯೆಯನ್ನು ಪ್ರಾರಂಭಿಸಲಾಗಿದ್ದು, ಉಳಿದ 38 ಔಷಧಿಗಳ ಖರೀದಿಗೆ ಟೆಂಡರ್ ಪ್ರಕ್ರಿಯೆ ಆರಂಭಿಸಲಾಗಿದೆ ಎಂದು ಮಾಹಿತಿ ನೀಡಿದರು.

ರಾಜ್ಯದ ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಎಬಿ-ಎಆರ್‌ಕೆ, ಜೆಎಸ್‌ಎಸ್‌ಕೆ, ಎಆರ್‌ಎಸ್ ಅನುದಾನಗಳನ್ನು ಬಳಸಿಕೊಂಡು ಅಗತ್ಯ ಜೀವರಕ್ಷಕ ಔಷಧಿಗಳನ್ನು ಖರೀದಿಸಿ ರೋಗಿಗಳಿಗೆ ನೀಡಲು ಕ್ರಮ ವಹಿಸಲು ಸೂಚಿಸಲಾಗಿದೆ ಎಂದು ಸಚಿವರು ತಿಳಿಸಿದರು.ರಾಜ್ಯದಲ್ಲಿ ಒಟ್ಟು 13 ಭ್ರೂಣ ಹತ್ಯೆ ಪ್ರಕರಣಗಳು ದಾಖಲಾಗಿವೆ ಎಂದು ಶಾಸಕರಾದ ಡಾ.ಉಮಾಶ್ರೀ ಅವರ ಪ್ರಶ್ನೆಗೆ ಸಚಿವರು ಉತ್ತರಿಸಿದರು.ಉಮಾಶ್ರೀ ಅವರ ಪರವಾಗಿ ಐವಾನ್ ಡಿಸೋಜ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಭ್ರೂಣ ಹತ್ಯೆ ತಡೆಗಟ್ಟಲು ಸರ್ಕಾರ ಹಲವು ಕ್ರಮಗಳನ್ನು ಕೈಗೊಂಡಿದೆ. ರಾಜ್ಯದಲ್ಲಿ ಇದುವರೆಗೂ ಕಾಯಿದೆ ಉಲ್ಲಂಘಿಸಿರುವ ಸ್ಕ್ಯಾನಿಂಗ್ ಸೆಂಟರ್ ಮಾಲೀಕರು, ವೈದ್ಯರ ವಿರುದ್ಧ 150 ಪ್ರಕರಣಗಳನ್ನು ನ್ಯಾಯಾಲಯದಲ್ಲಿ ದಾವೆ ಹೂಡಲಾಗಿದೆ. ಈ ಪೈಕಿ 80 ಪ್ರಕರಣಗಳಲ್ಲಿ ದಂಡ ವಿಧಿಸಲಾಗಿದೆ. 70 ಪ್ರಕರಣಗಳು ನ್ಯಾಯಾಲಯಲ್ಲಿ ವಿವಿಧ ಹಂತಗಳಲ್ಲಿ ಬಾಕಿಯಲ್ಲಿ ಇರುತ್ತವೆ. ರಾಜ್ಯದಲ್ಲಿ ಭ್ರೂಣಹತ್ಯೆ ಬಗ್ಗೆ ಮಾಹಿತಿ ಕೊಟ್ಟವರಿಗೆ 1 ಲಕ್ಷ ರೂ. ಬಹುಮಾನ ನೀಡಲಾಗುತ್ತಿದ್ದು, ಕಳೆದ ವರ್ಷ ಮೂವರಿಗೆ ಬಹುಮಾನ ನೀಡಲಾಗಿದೆ. ಸಾರ್ವಜನಿಕರಲ್ಲಿ ಹೆಣ್ಣು ಭ್ರೂಣಹತ್ಯೆ ಮಾಡದಂತೆ ಜಾಗೃತಿ ವಹಿಸಲಾಗುತ್ತಿದೆ ಎಂದರು. ಭ್ರೂಣಹತ್ಯೆ ತಡೆಗಟ್ಟಲು ಮತ್ತು ಇದರ ಬಗ್ಗೆ ನಿಗಾ ಇಡಲು ನೋಡಲ್ ಅಧಿಕಾರಿಯನ್ನು ನೇಮಿಸಲಾಗಿದೆ ಎಂದು ಹೇಳಿದರು.

## ಶ್ರೀಶೈಲ ಪಾದಯಾತ್ರಿಗಳಿಗೆ 'ಗೆಳೆಯರ ಬಳಗ'ದಿಂದ ಅನ್ನದಾಸೋಹ ಮತ್ತು ಆರೋಗ್ಯ ಸೇವೆ

ಧೈರ್ಯದ ದಾರಿ

**ಸಿರವಾರ :** ಯುಗಾದಿ ಹಬ್ಬದ ನಿಮಿತ್ತ ಶ್ರೀಶೈಲ ಮಲ್ಲಿಕಾರ್ಜುನನ ದರ್ಶನಕ್ಕೆ ಪಾದಯಾತ್ರೆ ಕೈಗೊಂಡಿರುವ ಸಾವಿರಾರು ಭಕ್ತಾದಿಗಳಿಗಾಗಿ ಇಲ್ಲಿನ ಗೆಳೆಯರ ಬಳಗದ ವತಿಯಿಂದ ಹಮ್ಮಿಕೊಂಡಿದ್ದ ಅನ್ನದಾಸೋಹ ಕಾರ್ಯಕ್ರಮವು ಭಕ್ತಿಪೂರ್ವಕವಾಗಿ ಜರುಗಿತು.

ಶ್ರೀಶೈಲಕ್ಕೆ ತೆರಳುವ ಮುಖ್ಯ ರಸ್ತೆಯ ಬದಿಯಲ್ಲಿ ತಾತ್ಕಾಲಿಕ ಪೆಂಡಾಲ್ ನಿರ್ಮಿಸಿದ್ದ ಬಳಗದ ಸದಸ್ಯರು, ಪಾದಯಾತ್ರಿಗಳಿಗೆ ನಿರಂತರವಾಗಿ ಊಟ, ಉಪಹಾರ ಹಾಗೂ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಿದ್ದರು. ಬಿಸಿಲಿನ ತಾಪದಿಂದ ಬಳಲಿದ್ದ ಭಕ್ತರಿಗೆ ತಂಪು ಪಾನೀಯ ಹಾಗೂ ಮಜ್ಜಿಗೆ ವಿತರಿಸಿ ಆಯಾಸ ಪರಿಹರಿಸುವ ಮೂಲಕ ಆಸರೆಯಾದರು.

ಗೆಳೆಯರ ಬಳಗದ ಸದಸ್ಯರೇ ಸ್ವಯಂಪ್ರೇರಿತರಾಗಿ ಹಣ ಕ್ರೋಢೀಕರಿಸಿ, ಸ್ವತಃ ಅಡುಗೆ ತಯಾರಿಸಿ ಬಡಿಸುವ ಮೂಲಕ ಸೌಹಾರ್ದತೆ ಮೆರೆದರು. ಈ ಸೇವೆಯನ್ನು ಕಂಡ ಸ್ಥಳೀಯ ಮುಖಂಡರು ಹಾಗೂ ಸಾರ್ವಜನಿಕರು ಬಳಗದ ಕಾರ್ಯವನ್ನು ಮುಕ್ತಕಂಠದಿಂದ ಶ್ಲಾಘಿಸಿದರು. "ಪಾದಯಾತ್ರಿಗಳ ಸೇವೆ ಮಾಡುವುದು ನಮಗೆ ಸಿಕ್ಕ ಪುಣ್ಯದ ಕೆಲಸ. ಭಕ್ತರ ಹಸಿವು



ನೀಗಿಸುವುದರಲ್ಲಿ ನಾವು ದೈವಿಕ ತೃಪ್ತಿ ಕಾಣುತ್ತಿದ್ದೇವೆ" ಎಂದು ಗೆಳೆಯರ ಬಳಗದ ಸದಸ್ಯರಾದ ಚಂದ್ರು ಹಡಪದ್ ಈ ಸಂದರ್ಭದಲ್ಲಿ ಹರ್ಷ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ನಾಗರಾಜ್ ಬೊಮ್ಮನಾಳ ನೇಕರು ಮಲ್ಲಯ್ಯ ಪೂಜಾರಿ ಸದಾಶಿವ ಮಲ್ಲಯ್ಯ ಹುಲಿಗೆಪ್ಪ ಮಡಿವಾಳ ಗಂಗಾಧರ್ ಹಡಪದ್ ಶಿವಗೇನಿ ಟ ನಿಂಗರಾಜ್ ಮುನಿಯಪ್ಪ ನಿಂಗಪ್ಪ ಪೂಜಾರಿ ಅರವಿಂದ ಸರೋದೆ ರಾಮಚಂದ್ರ ಹನುಮಂತ ಮಲ್ಲಿಕಾರ್ಜುನ ಲಕ್ಕಮ್ ದಿನ್ನಿ ನಾಗರಾಜ್ ಇನ್ನು ಅನೇಕ ಭಕ್ತಾದಿಗಳು ಇದ್ದರು.

## ಸಿರವಾರ: ಪ್ರತಿಭಟನೆ ವಾಪಸ್; ರಂಜಾನ್ ಬಳಿಕ ಖಬರಸ್ಥಾನ್ ತಡೆಗೋಡೆ ನಿರ್ಮಾಣಕ್ಕೆ ಭರವಸೆ

**ಸಿರವಾರ:** ಇಲ್ಲಿನ ಖಬರಸ್ಥಾನ್ ತಡೆಗೋಡೆ ನಿರ್ಮಾಣಕ್ಕೆ ಒತ್ತಾಯಿಸಿ ಇಂದು (ಮಾಚ್ 9) ಹಮ್ಮಿಕೊಳ್ಳಲಾಗಿದ್ದ ಪಟ್ಟಣ ಪಂಚಾಯತಿ ಮುತ್ತಿಗೆ ಹಾಗೂ ಬೀಗ ಹಾಕುವ ಪ್ರತಿಭಟನೆಯನ್ನು ಮುಸ್ಲಿಂ ಸಮಾಜದ ಮುಖಂಡರು ಕೈಬಿಟ್ಟಿದ್ದಾರೆ.

ತಹಶೀಲ್ದಾರ್ ಹಾಗೂ ಸಿಪಿಐ ಶಶಿಕಾಂತ್ ಎಂ. ಅವರ ನೇತೃತ್ವದಲ್ಲಿ ನಡೆದ ವಿಶೇಷ ಸಂಧಾನ ಸಭೆಯಲ್ಲಿ, ರಂಜಾನ್ ಹಬ್ಬದ ನಂತರ ಸಂಬಂಧಿಸಿದ ಅಧಿಕಾರಿಗಳೊಂದಿಗೆ ಚರ್ಚಿಸಿ ತಡೆಗೋಡೆ ನಿರ್ಮಾಣ ಮಾಡಿಕೊಡುವ ಭರವಸೆ ನೀಡಿದ ಹಿನ್ನೆಲೆಯಲ್ಲಿ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ.

ಅಧಿಕಾರಿಗಳ ಸಕಾರಾತ್ಮಕ ಸ್ಪಂದನೆಗೆ ಗೌರವ ನೀಡಿ ಪ್ರತಿಭಟನೆಯನ್ನು ಮುಂದೂಡಲಾಗಿದ್ದು, ಸಭೆಯಲ್ಲಿ ನೂರಕ್ಕೂ




ಹೆಚ್ಚು ಮುಸ್ಲಿಂ ಬಾಂಧವರು ಪಾಲ್ಗೊಂಡಿದ್ದರು. "ಸಮಾಜದ ಹಿತದೃಷ್ಟಿಯಿಂದ ಸಭೆಗೆ ಆಗಮಿಸಿ ಬೆಂಬಲ ನೀಡಿದ ಎಲ್ಲಾ ಮುಸ್ಲಿಂ ಬಾಂಧವರಿಗೆ ಧನ್ಯವಾದಗಳು" ಎಂದು ಮುಖಂಡರಾದ ಎಂ. ಡಿ ಹುಸೇನ್ ಅವರು ತಿಳಿಸಿದರು.

## ಸಮಾಜದ ಅಭಿವೃದ್ಧಿಗೆ ಮಹಿಳೆಯರು ಮಹತ್ವದಕೊಡುಗೆ ನೀಡುತ್ತಿದ್ದಾರೆ:ಸಚಿವ ಈಶ್ವರ ಬಿ.ಖಂಡ್ರೆ

**ಬೀದರ, ಮಾ.9:** ಮಹಿಳೆಯರು ಇಂದು ಶಿಕ್ಷಣ, ಉದ್ಯೋಗ, ರಾಜಕೀಯ ಹಾಗೂ ಕ್ರೀಡಾ ಸೇರಿದಂತೆ ಎಲ್ಲಾ ಕ್ಷೇತ್ರಗಳಲ್ಲಿಯೂ ತಮ್ಮ ಸಾಮರ್ಥ್ಯವನ್ನು ತೋರಿಸಿ ಸಮಾಜದ ಅಭಿವೃದ್ಧಿಗೆ ಮಹತ್ವದ ಕೊಡುಗೆ ನೀಡುತ್ತಿದ್ದಾರೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಹೇಳಿದರು.

ಅವರು ರವಿವಾರ ಪೂಜ್ಯ ಚನ್ನಬಸವ ಪಟ್ಟದೇವರು ರಂಗಮಂದಿರದಲ್ಲಿ ಆಯೋಜಿಸಿದ 2025-26ನೇ ಸಾಲಿನ ಬೀದರ ಜಿಲ್ಲಾ ಮಟ್ಟದ ಮಹಿಳಾ ಕ್ರೀಡಾಕೂಟವನ್ನು ಉದ್ಘಾಟಿಸಿ ಮಾತನಾಡಿದರು.

ಕ್ರೀಡೆಗಳು ಮಹಿಳೆಯರ ಆರೋಗ್ಯ, ಆತ್ಮವಿಶ್ವಾಸ ಹಾಗೂ ನಾಯಕತ್ವ ಗುಣಗಳನ್ನು ಬೆಳೆಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ. ಇಂತಹ ಕ್ರೀಡಾಕೂಟಗಳು ಗ್ರಾಮೀಣ ಹಾಗೂ ನಗರ ಭಾಗಗಳ ಮಹಿಳೆಯರಿಗೆ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಲು ಉತ್ತಮ ವೇದಿಕೆಯಾಗುತ್ತವೆ. ಜಿಲ್ಲೆಯ ಮಹಿಳಾ ಕ್ರೀಡಾಪಟುಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ರಾಜ್ಯ ಮತ್ತು ರಾಷ್ಟ್ರಮಟ್ಟದಲ್ಲಿ ಸಾಧನೆ ಮಾಡಬೇಕು ಎಂದು ಸಚಿವರು ಹಾರೈಸಿದರು.

ಈ ಸಂದರ್ಭದಲ್ಲಿ ಪೌರಾಡಳಿತ ಹಾಗೂ ಹಜ್ ಸಚಿವರಾದ




ರಹೀಮ ಖಾನ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಗಿರೀಶ ಬದೋಲೆ, ಯುವಜನ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಪ್ರಕಾಶ, ಬೀದರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಬಸವರಾಜ ಜಾಬಶೆಟ್ಟಿ ಸೇರಿದಂತೆ ಅನೇಕ ಮಹಿಳಾ ಕ್ರೀಡಾಪಟುಗಳು ಉಪಸ್ಥಿತರಿದ್ದರು.

## ಚಿಕ್ಕಕೋಟ್ನೆಕಲ್ ಗ್ರಾಮದಲ್ಲಿ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ

ಧೈರ್ಯದ ದಾರಿ

**ಮಾನ್ವಿ:** ತಾಲೂಕಿನ ಚಿಕ್ಕಕೋಟ್ನೆಕಲ್ ಗ್ರಾಮದಲ್ಲಿ ಲೊಯೋಲ ಸಮಾಜ ಸೇವಾ ಕೇಂದ್ರ ಮಾನ್ವಿ, ಜನಶಕ್ತಿ ಟ್ರಸ್ಟ್ ಮಹಿಳಾ ಸ್ವ-ಸಹಾಯ ಸಂಘಗಳ ಒಕ್ಕೂಟ ಮಾನ್ವಿ ಸಂಯುಕ್ತಾಶ್ರಯದಲ್ಲಿ ನಡೆದ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮವನ್ನು ಸಿದ್ದಲಿಂಗಪ್ಪ ಹಿರಿಯ ವಕೀಲರು ಉದ್ಘಾಟಿಸಿ ಮಾತನಾಡಿ ಸಂವಿಧಾನದ ಮೂಲಕ ಮಹಿಳೆಯರಿಗೆ ರಾಜಾಕೀಯ,ಆರ್ಥಿಕ,ಸಾಮಾಜಿಕ ಸಮಾನತೆ ಸೇರಿದಂತೆ ಶಿಕ್ಷಣದ ಹಕ್ಕುಗಳನ್ನು ನೀಡಿದ ಡಾ.ಬಿ.ಆರ್.ಅಂಬೇಡ್ಕರ್, ಹಾಗೂ ಪ್ರಥಮವಾಗಿ ಮಹಿಳೆಯರಿಗೆ ಶಿಕ್ಷಣವನ್ನು ನೀಡುವುದಕ್ಕೆ ಶ್ರಮಿಸಿದ ಸಾವಿತ್ರಿಬಾಯಿ ಪುಲೇ ರವರನ್ನು ಮಹಿಳೆಯರು ಸದಾ ಸ್ಮರಿಸಿಕೊಳ್ಳಬೇಕಾಗಿದೆ ಕಾನೂನು ಸೇವಾ ಪ್ರಾಧಿಕಾರವು ಮಹಿಳೆಯರ ಮೇಲೆ ನಡೆಯುವ ಶೋಷಣೆ,ದೌರ್ಜನ್ಯ,ಹಿಂಸೆಗಳ ವಿರುದ್ಧ ನ್ಯಾಯವನ್ನು ಪಡೆಯುವುದಕ್ಕೆ ಹಾಗೂ ದೂರನ್ನು ನೀಡುವುದಕ್ಕೆ ಅಗತ್ಯ ಕಾನೂನಿನ ಅರಿವು ಮತ್ತು ನೆರವನ್ನು




ಉಚಿತವಾಗಿ ನೀಡುತ್ತದೆ. ಅದ್ದರಿಂದ ಮಹಿಳೆಯರು ತಮ್ಮ ಮೇಲೆ ನಡೆಯುವ ದೌರ್ಜನ್ಯಗಳ ವಿರುದ್ಧ ಕಾನೂನು ರಕ್ಷಣೆಯನ್ನು ಪಡೆದುಕೊಳ್ಳಬೇಕು.ಮಹಿಳೆಯರು ಶಿಕ್ಷಣವನ್ನು ಪಡೆದುಕೊಳ್ಳುವ ಮೂಲಕ ಸರ್ಕಾರದ ಯೋಜನೆಗಳ ಮಾಹಿತಿಯನ್ನು ಪಡೆದುಕೊಳ್ಳುವ ಮೂಲಕ ಸದೃಡರಾಗಬೇಕು ಎಂದು ತಿಳಿಸಿದರು. 2ನೇಪುಟಕ್ಕೆ►

## ಮಕ್ಕಳಿಗೆ ಶಿಕ್ಷಣದ ಜೊತೆಗೆ ಸಂಸ್ಕಾರ, ವಿದ್ಯೆ ಜೊತೆಗೆ ವಿನಾಯವನ್ನು ನೀಡುವಂತ ಶಿಕ್ಷಣ ಅಗತ್ಯ: ಶ್ರೀ ಸದಾಶಿವ ಮಹಾಸ್ವಾಮಿಗಳು



ಧೈರ್ಯದ ದಾರಿ

**ಮಾನ್ವಿ:** ಶ್ರೀ ರಾಜಾ ಹನುಮಪ್ಪ ನಾಯಕ ದೊರೆ ಸ್ಮರಕ ಸಮಾಜ ಸೇವಾ ಸಂಸ್ಥೆ ಮಾನ್ವಿ ಶ್ರೀ ರಂಗನಾಥ ವಿದ್ಯಾಲಯ ಕನ್ನಡ ಹಿರಿಯ ಪ್ರಾಥಮಿಕ ಹಾಗೂ ಪ್ರೌಢ ಶಾಲೆಯ ಅವರಣದಲ್ಲಿ ನಡೆದ ಅಂತರಾಷ್ಟ್ರಿಯ ಮಹಿಳಾ ದಿನಾಚರಣೆ ಹಾಗೂ 10 ನೇ ತರಗತಿ ವಿದ್ಯಾರ್ಥಿಗಳಿಗೆ ಬಿಳ್ಕೋಡುಗೆ ಸಮಾರಂಭ ಕಾರ್ಯಕ್ರಮವನ್ನು ಚೀಕಲಪರ್ವಿ ಶ್ರೀ ರುದ್ರಮುನೀಶ್ವರ ಮಠದ ಶ್ರೀ ಸದಾಶಿವ ಮಹಾಸ್ವಾಮಿಗಳು ಉದ್ಘಾಟಿಸಿ ಆರ್ಶೀವಾಚನ ನೀಡಿ ಮಕ್ಕಳಿಗೆ ಶಿಕ್ಷಣದ ಜೊತೆಗೆ ಸಂಸ್ಕಾರ, ವಿದ್ಯೆ ಜೊತೆಗೆ ವಿನಾಯವನ್ನು ನೀಡುವಂತ ಶಿಕ್ಷಣವನ್ನು ಶಿಕ್ಷಣ ಸಂಸ್ಥೆಗಳು ನೀಡಿದಾಗ ಮಾತ್ರ ಸಮಾಜದಲ್ಲಿ ಉತ್ತಮ ವ್ಯಕ್ತಿಗಳಾಗಿರುವುದಕ್ಕೆ ಸಾಧ್ಯವಾಗುತ್ತದೆ ಮನೆಯ ನಂತರ ಮಕ್ಕಳು ಹೆಚ್ಚು ಸಮಯವನ್ನು ಶಾಲೆಯಲ್ಲಿನ ಗುರುಗಳ ಜೊತೆಯಲ್ಲಿ ಕಳೆಯುತ್ತಾರೆ ಗುರುಗಳು ಮಕ್ಕಳಿಗೆ ತಂದೆ,ತಾಯಿ, ಗುರುಗಳ ಬಗ್ಗೆ ಪೂಜಾನಿಯವಾದ ಭಾವನೆ ಬೆಳೆಯುವಂತೆ ಅವರನ್ನು ರೂಪಿಸುವ ಜವಾಬ್ದರಿ ಇದ್ದೆ. ಪಾಲಕರು ಕೂಡ ಮಕ್ಕಳಿಗಾಗಿ ಆಸ್ತಿಯನ್ನು ಮಾಡದೆ ಮಕ್ಕಳನ್ನೆ ಆಸ್ತಿಯನ್ನಾಗಿ ಬೆಳೆಸಬೇಕು ಆಗ ಮಾತ್ರ ಸುಂದ ರವಾದ ಸಮಾಜವನ್ನು ಕಟ್ಟುವುದಕ್ಕೆ ಸಾಧ್ಯವಾಗುತ್ತದೆ. ಹಾಗೂ ಹೆಣ್ಣುಮಕ್ಕಳಿಗೂ ಕೂಡ ಉನ್ನತ ಶಿಕ್ಷಣವನ್ನು ನೀಡುವುದಕ್ಕೆ ಹೆಚ್ಚಿನ ಅದ್ಯತೆಯನ್ನು ನೀಡಬೇಕು. ಮಕ್ಕಳಲ್ಲಿ ಉತ್ತಮ ಮೌಲ್ಯಗಳನ್ನು ತುಂಬವ ಉದ್ದೇಶದಿಂದ ಶಾಲೆಯಲ್ಲಿ ತಾಯಂದಿರಿಗೆ ಮಕ್ಕಳಿಂದ ಪಾದಪೂಜೆಯನ್ನು ಹಮ್ಮಿಕೊಳ್ಳ ಲಾಗಿರುವುದು ಉತ್ತಮ ಕಾರ್ಯವಾಗಿದೆ ಎಂದು ತಿಳಿಸಿದರು.

ಶ್ರೀ ರಂಗನಾಥ ವಿದ್ಯಾಲಯದ ಅಧ್ಯಕ್ಷರು ಹಾಗೂ ತಾಲೂಕು ಖಾಸಗಿ ಶಿಕ್ಷಣ ಸಂಸ್ಥೆಗಳ ಅಧ್ಯಕ್ಷರಾದ ರಾಜಾ ಸುಭಾಶ್ಚಂದ್ರ ನಾಯಕ ಮಾತನಾಡಿ ಪಟ್ಟಣದ ಬಡಕುಟುಂಬಗಳ ಮಕ್ಕಳಿಗೆ ಕಡಿಮೆ ಶುಲ್ಕವನ್ನು ಪಡೆದು ಗುಣಮಟ್ಟದ ಶಿಕ್ಷಣವನ್ನು ನೀಡಲಾಗುತ್ತಿದೆ ಜೊತೆಗೆ ಪಠ್ಯದ ಜೊತೆಗೆ ವಸತಿ ವಿದ್ಯಾಲಯಗಳ ಪ್ರವೇಶ ಪರೀಕ್ಷೆಗಳಿಗೆ ಸಿದ್ದತೆ, ಕ್ರೀಡೆಗಳಿಗೆ ಉತ್ತೇಜನ, ಕೋವಿಡ್ ಸಮಯದಲ್ಲಿ ಆಹಾರ ಕೀಟ್‌ಗಳ ವಿತರಣೆ, ಸಹೋದಾರ ರಾಜಾ



ವಸಂತನಾಯಕರ ವರ ಆಶಾಯದಂತೆ ಪರಿಸರ ಸಂರಕ್ಷಣೆ ಸೇರಿದಂತೆ ವಿವಿಧ ಸಾಮಾಜಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ಅಂತರಾಷ್ಟ್ರಿಯ ಮಹಿಳಾ ದಿನಚಾರಣೆ ಕುರಿತು ಪುರಸಭೆ ಹಿರಿಯ ಸದಸ್ಯರಾದ ಲಕ್ಷ್ಮೀದೇವಿ ನಾಯಕ ವಕೀಲರು ಮಾತನಾಡಿದರು. ಶಾಲೆಯ ವಿದ್ಯಾರ್ಥಿಗಳು ತಮ್ಮ ತಾಯಿಯವರ ಪಾದಪೂಜೆ ಮಾಡಿದರು.ಕಾರ್ಯಕ್ರಮದಲ್ಲಿ ಶ್ರೀ ರಂಗನಾಥ ವಿದ್ಯಾಲಯದ ಸಂಸ್ಥಾಪಕರಾದ ಲಕ್ಷ್ಮೀದೇವಿ, ಮುಖ್ಯಗುರು ಶರಣಮ್ಮ ಭಂಗಿ, ಹೆಚ್ ಸರ್ಫುದ್ದಿನ್, ನೇತಾಜಿ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ವಿಜಯುಲಕ್ಷ್ಮೀ ಸರ್ವೋದಯ ಪಿಯು ಕಾಲೇಜಿನ ಪ್ರಾಚರ್ಯರಾದ ರೇಣುಕಾ ಅಂಜನೆಯ್ಯ ಹೆಚ್ ,ಬಿ.ವಿ.ಆರ್ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಪದ್ಮವತಿ, ಸ್ಟೆಪ್ಪಿಂಗ್ ಸ್ಟೋನ್ ಮುಖ್ಯಸ್ಥರಾದ ಅಮರ ವಾಣಿ, ಆರ್ಟ್ ಆಫ್ ಲಿವಿಂಗ್ ತಾ.ಸಂಚಾಲಕರಾದ ರಾಣಿವನಮಾಲ ದೇವಿ, ಪೂಜಾ ವಕೀಲರು, ಜ್ಞಾನ ಭಾರತಿ ಶಿಕ್ಷಣ ಸಂಸ್ಥೆ ಪ್ರೋತ್ನಾಳ್ ಕಾರ್ಯದರ್ಶಿ ಮುಮ್ತಾಜ್ ಬೇಗಾಂ,ವಿದ್ಯಾಭಾರತಿ ಶಿಕ್ಷಣ ಸಂಸ್ಥೆ ಪೋತ್ನಾಳ್ ಕಾರ್ಯದರ್ಶಿ ಸಾರಾ ಆರ್ ತಾಳಿಕೋ ಟೆ, ಶೈನಾಜ್ ಬೇಗಾಂ, ವಿಶ್ವಚೇತನ ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಗೀತಾ ಹಿರೇಮಠ. ರೈಸಿಂಗ್ ಸನ್ ಶಾಲೆಯಮುಖ್ಯಸ್ಥರಾದ ಹೀನಾ ಆಜ್ಮೀರ್, ಮತ್‌ವಾಲೆ ಮೊಹಮ್ಮದ್ ಹಾರೂನ್, ಅಲಿಮ ಖಾನ್, ಬಂದೆನಾವಜ್, ಭೀಮರಾಯ, ಮಹೆಬೂಬ್ ಪಾಟೀಲ್, ಶರಣು, ಕಾಮೇಶ್ ಸೇರಿದಂತೆ ಶಾಲೆಯ ಶಿಕ್ಷಕರು,ವಿದ್ಯಾರ್ಥಿಗಳು, ಪಾಲಕರು ಭಾಗವಹಿಸಿದರು.

## ಮೊದಲನೇ ಪುಟದಿಂದ

# ಚಿಕ್ಕಕೋಟ್ನೆಕಲ್ ಗ್ರಾಮದಲ್ಲಿ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ

ಆರ್.ಬಿ.ಎಸ್.ಕೆ, ವೈದ್ಯಾಧಿಕಾರಿಗಳಾದ ಡಾ.ಅಂಬಿಕಾಮಧುಸೂ ದನ್ ಮಾತನಾಡಿ ಮಹಿಳೆಯರು, ತ್ಯಾಗ,ಶಾಂತಿಯ ಮನೋ ಭವಾದ ಪ್ರತಿಕವಾಗಿದ್ದಾರೆ, ಜಿಲ್ಲೆಯಲ್ಲಿ ಬಾಲ ಗರ್ಭಿಣಿಯರ ಸಂಖ್ಯೆ ಹೆಚ್ಚುತ್ತಿರುವುದು ಕಳವಳಕಾರಿಯಾಗಿದೆ. ಸರ್ಕಾರವು ಆರೋಗ್ಯ ಇಲಾಖೆ ಮೂಲಕ ಗರ್ಭಕೋಶದ ಕ್ಯಾನ್ಸರ್ ತಡೆಗಟ್ಟುವುದಕ್ಕೆ ಉಚಿತವಾಗಿ ಲಸಿಕೆಯನ್ನು ನೀಡುವ ಯೋಜನೆ ಜಾರಿಗೆ ತಂದಿದೆ. ಸಮಾಜದಲ್ಲಿ ಮಹಿಳೆಯರಿಗೆ ಸಮಾನತೆ, ಆರೋಗ್ಯ.ಶಿಕ್ಷಣ,ನೀಡುವುದು ಮುಖ್ಯವಾಗಿರುತ್ತದೆ. ಇಂದಿನ ದಿನಗಳಲ್ಲಿ ಗ್ರಾಮೀಣ ಭಾಗದಲ್ಲಿ ಪ್ರತಿವರ್ಷ 4 ಸಾವಿರ ವಿದ್ಯಾರ್ಥಿನಿಯರು ಉನ್ನತ ಶಿಕ್ಷಣವನ್ನು ಮುಂದುವರೆಸುವುದಕ್ಕೆ ಸಾಧ್ಯವಾಗದೆ ಶಿಕ್ಷಣವನ್ನು ಅರ್ಧಕ್ಕೆ ನಿಲ್ಲಿಸುತ್ತಿದ್ದಾರೆ. ಗ್ರಾಮೀಣ ಭಾಗದ ಮಹಿಳೆಯರಿಗೆ ಮಿತಸಂತಾನ , ಲೈಂಗಿಕ ಆರೋಗ್ಯ, ಗರ್ಭಿಣಿ,ಬಣಾಂತಿಯರ ಆರೈಕೆ, ಅಪೌಷ್ಟಿಕತೆಯ ನಿವಾರಣೆ, ಮುಟ್ಟಿನ ನೈರ್ಮಾಲ್ಯ, ವೈಯುಕ್ತಿಕ ಸೌಚ್ಚತೆ, ಸಂತಾನೋತ್ಪತಿ ಕ್ರೀಯೆ ಕುರಿತು ಶಾಲೆಗಳಲ್ಲಿ ಮುಕ್ತವಾಗಿ ತಿಳಿಸುವ ಅಗತ್ಯವಿದೆ ಎಂದು ತಿಳಿಸಿದರು.

ಲೊಯೋಲ ಸಮಾಜ ಸೇವಾ ಕೇಂದ್ರ ಮಾನ್ವಿಯ ಮುಖ್ಯಸ್ಥರದ ಪಾ.ಸಿಪ್ರೀಯಾನ್ ಟೀಲಿಸ್ ಮಾತನಾಡಿ ಗ್ರಾಮೀಣ ಭಾಗದಲ್ಲಿ ಮಹಿಳೆಯರ ಸಬಲಿಕರಣಕ್ಕಾಗಿ ಲೊಯೋಲ ಸಮಾಜ ಸೇವಾ ಕೇಂದ್ರ ಶ್ರಮಿಸುತ್ತಿದೆ ಎಂದು ತಿಳಿಸಿದರು.

ಮಹಾಶಕ್ತಿ ಮಹಿಲಾ ಸಬಲಿಕರಣ ಕೇಂದ್ರದ ಮುಖ್ಯಸ್ಥರಾದ ವಿಜಯರಾಣಿ ,ಜನಶಕ್ತಿ ಟ್ರಸ್ಟ್ ಹೊಸೂರಿನ ಮುಖ್ಯಸ್ಥರಾದ ಗಂಗಮ್ಮ ಮಾತನಾಡಿದರು.

ಗ್ರಾಮದ ಗ್ರಾಮ ಪಂಚಾಯಿತಿಯಿಂದ ವೇದಿಕೆಯ ವರೆಗೆ ಡಾ.ಬಿ.ಆರ್.ಅಂಬೇಡ್ಕಾರ್ ರವರ ಭಾವಚಿತ್ರ ಮೆರವಣಿಗೆ ನಡೆಸಲಾಯಿತು. ಹಾಗೂ ವಿವಿಧ ಮಹಿಳಾ ಸಾಧಕಿಯರನ್ನು ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಚಿಕ್ಕಕೋಟ್ನೆಕಲ್ ಆರೋಗ್ಯ ಉಪಕೇಂದ್ರದ ಬಸಮ್ಮ ,ಸಂಸ್ಥೆಯ ಸಂಯೋಜಕರಾದ ಎಂ.ಆರ್.ಬೇರಿ. ದೇವರಾಜ, ಭಾಸ್ಕರ್, ಅನ್ನಮ್ಮ ,ವಿಜಯಲಕ್ಷಿ , ತಿರುಮಲಮ್ಮ, ಸುಚಿತ್ರ,ರವೀಂದ್ರ ಜಾನೇಕಲ್ ಮರಿಯಪ್ಪ,ಬಸವರಾಜ, ಸಿದ್ದಲಿಂಗಪ್ಪ, ಮಹಿಳಾ ಸ್ವ.ಸಹಾಯ ಸಂಘಗಳ ಮುಖ್ಯಸ್ಥರಾದ ಶೀಲಾ, ಪ್ರೇಮ, ಸುನೀತಾ ಸೇರಿದಂತೆ ಜಾಗಿರ ಪನ್ನೂರ್, ಯಡಿವಾಳ, ಚೀಕಲಪರ್ವಿ ಹಲುಗುಂಚಿ, ಉಮಳಿಹೊಸೂರು, ಸೇರಿದಂತೆ ವಿವಿಧ ಗ್ರಾಮಗಳ ಜನಶಕ್ತಿ ಟ್ರಸ್ಟ್ ಮಹಿಳಾ ಸ್ವ-ಸಹಾಯ ಸಂಘಗಳ ಒಕ್ಕೂಟದ ಸದಸ್ಯರು ಭಾಗವಹಿಸಿದರು.

# ಆತ್ಮೀಯ ಗೆಳೆತನ ಸಾಲ

ಒಂದು ದಿನ ಒಬ್ಬ ಗೆಳೆಯ ಓಡಿ ಬಂದು ಮುಖ ಚಿಕ್ಕದಾಗಿ ಮಾಡಿ ಹೇಳಿದನು:
"ನಿನ್ನ ಬಳಿ ಒಂದು ಸಹಾಯ ಕೇಳಬೇಕಿತ್ತು. ಕೊನೆಯದಾಗಿ ನಿನ್ನ ಬಳಿ ಬಂದಿದ್ದೇನೆ, 'ಇಲ್ಲ' ಅನ್ನಬೇಡ."

ಅವನ ಮಾತು ಕೇಳಿ ನಾನು ಕೇಳಿದೆ:
"ಹೇಳು ಗೆಳೆಯ, ಏನು ಸಹಾಯ?"

ಅವನು ನಿಧಾನವಾಗಿ ಹೇಳಿದನು:
"ಒಂದು ಐದು ಸಾವಿರ ರೂಪಾಯಿ ಬೇಕಿತ್ತು."

"ಹೌದಾ? ಸರಿ," ಎಂದು ನಾನು ಮನೆಯೊಳಗೆ ನೋಡುತ್ತಾ,
"ಏ ಇವಳೇ, ಐದು ಸಾವಿರ ರೂಪಾಯಿ ತಂದು ಕೊಡು" ಎಂದೆ.
ಹೆಂಡತಿ ಹಣ ತಂದು ಕೊಟ್ಟಳು, ನಾನು ಗೆಳೆಯನಿಗೆ ಕೊಟ್ಟೆ.

ಗೆಳೆಯ ಹೊರಟ ನಂತರ ನಾನು ಸ್ವಲ್ಪ ಬೇಸರದಿಂದ ಕುಳಿತಿದ್ದೆ.
ಅದನ್ನು ಗಮನಿಸಿದ ಹೆಂಡತಿ ಹೇಳಿದಳು:


"ರೀ, ಹಣ ಕೊಟ್ಟ ಮೇಲೆ ಯಾಕೆ ಚಿಂತಿಸುತ್ತೀರಿ?
ಕೊಡುವ ಮೊದಲು ಯೋಚಿಸಬೇಕು ಈ ಹಣ ಕೊಟ್ಟು ಮರೆಯುವಷ್ಟು ನನ್ನ ಬಳಿ ಮನಸ್ಸು ಇದೆಯಾ ಅಂತ. ಕೊಟ್ಟ ಮೇಲೆ ಚಿಂತೆ ಮಾಡಬಾರದು."

ಅದಕ್ಕೆ ನಾನು ಹೇಳಿದೆ:
"ಅದು ಹಣದ ವಿಷಯ ಅಲ್ಲ ಕಣೇ."

ಅವಳು ಆಶ್ಚರ್ಯದಿಂದ ಕೇಳಿದಳು:
"ಹಾಗಾದರೆ ಏನು?"

ನಾನು ನಿಧಾನವಾಗಿ ಹೇಳಿದೆ:
"ನನ್ನ ಗೆಳೆಯ ಎಲ್ಲರ ಬಳಿ ಹಣ ಕೇಳಿ ಕೊನೆಗೆ ನನ್ನ ಬಳಿ ಬಂದಿದ್ದಾನೆ.
ಮೊದಲೇ ನನ್ನ ಬಳಿ ಯಾಕೆ ಬಂದಿಲ್ಲ?
ನಾನು ಅವನ ನಂಬಿಕೆ ಉಳಿಸಿಕೊಳ್ಳಲಿಲ್ಲವೇ?
ನಮ್ಮ ಗೆಳೆತನ ಅಷ್ಟು ಗಟ್ಟಿಯಾಗಿಲ್ಲವೇ?

ನನಗೆ ಹಣ ಕೊಟ್ಟದ್ದಕ್ಕೆ ಬೇಸರ ಇಲ್ಲ
ಆದರೆ ನಾನು ಅವನಿಗೆ ಮೊದಲ ನೆನಪಾಗಲಿಲ್ಲ ಎಂಬುದೇ ನನ್ನ ಬೇಸರ."



-ಮಹಿಬೂಬ್ ಮದ್ಲಾಪೂರು.
ಸಂಪನ್ಮೂಲ ವ್ಯಕ್ತಿಗಳು ಮಾನ್ವಿ.

# ಶಕ್ತಿನಗರ ವ್ಯಾಪ್ತಿಯಲ್ಲಿ ಮಾರ್ಚ್ 11ರಂದು ವಿದ್ಯುತ್ ವ್ಯತ್ಯಯ

**ರಾಯಚೂರು ಮಾ,9–** ಶಕ್ತಿನಗರ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಉಪ ವಿಭಾಗದ ವ್ಯಾಪ್ತಿಗೆ ಬರುವ ಎಸ್-1 ನಿವೇದಿತ ಫೀಡರ್‌ನಲ್ಲಿ ತುರ್ತು ನಿರ್ವಹಣಾ ಕಾರ್ಯ ಹಮ್ಮಿಕೊಂಡಿರುವ ಪ್ರಯುಕ್ತ ಮಾರ್ಚ್ 11ರ ಬೆಳಿಗ್ಗೆ 10ಗಂಟೆಯಿಂದ ಸಂಜೆ 6ಗಂಟೆವರೆಗೆ ಸೂಗರೇಶ್ವರ ನಗರ, ಯಾದವ್ ನಗರ, ರೆಡ್ಡಿ ನಗರ, ಶಾಂತಿನಗರ, ಎಮ್.ಪಿ.ಸಿ.ಎಲ್., ಮೇನ್ ಗೇಟ್ ಏರಿಯಾ ಹಾಗೂ ವಿಶಾಲ್ ಕ್ರಾಸ್ ಪ್ರದೇಶದಲ್ಲಿ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಶಕ್ತಿನಗರ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ದ್ವಿತೀಯ ಪಿಯುಸಿ ಪರೀಕ್ಷೆ; 466 ವಿದ್ಯಾರ್ಥಿಗಳು ಗೈರು ಹಾಜರಿ

**ರಾಯಚೂರು ಮಾ,9–**ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿಯಿಂದ 2026ರ ಮಾರ್ಚ್ 09ರ ಸೋಮವಾರ ದಂದು ನಡೆದ ದ್ವಿತೀಯ ಪಿಯುಸಿ-01ರ ಶಿಕ್ಷಣ, ರಸಾಯಶಾಸ್ತ್ರ ಹಾಗೂ ಬೇಸಿಕ್ ಗಣಿತ ವಿಷಯದ ಪರೀಕ್ಷೆಯಲ್ಲಿ ಒಟ್ಟು 466 ವಿದ್ಯಾರ್ಥಿಗಳು ಗೈರು ಹಾಜರಿಯಾಗಿದ್ದಾರೆ.

ಜಿಲ್ಲೆಯ 43 ಪರೀಕ್ಷೆ ಕೇಂದ್ರಗಳಲ್ಲಿ ಶಿಕ್ಷಣ ವಿಷಯದಲ್ಲಿ ಒಟ್ಟು 2,454 ವಿದ್ಯಾರ್ಥಿಗಳು ನೋಂದಣೆಯಾಗಿದ್ದು, 2,102 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಿಯಾಗಿದ್ದಾರೆ. 352 ವಿದ್ಯಾರ್ಥಿಗಳು ಗೈರು ಹಾಜರಿಯಾಗಿದ್ದಾರೆ.

ರಸಾಯಶಾಸ್ತ್ರ ವಿಷಯದಲ್ಲಿ ಒಟ್ಟು 5,884 ವಿದ್ಯಾರ್ಥಿಗಳು ನೋಂದಣೆಯಾಗಿದ್ದು, 5,771 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಿಯಾಗಿದ್ದಾರೆ. 113 ವಿದ್ಯಾರ್ಥಿಗಳು ಗೈರು ಹಾಜರಿಯಾಗಿದ್ದಾರೆ. ಅಲ್ಲದೆ ಬೇಸಿಕ್ ಗಣಿತ ವಿಷಯದಲ್ಲಿ ಒಟ್ಟು 4 ವಿದ್ಯಾರ್ಥಿಗಳು ನೋಂದಣೆಯಾಗಿದ್ದು, 3 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಿಯಾಗಿದ್ದಾರೆ. ಒಬ್ಬ ವಿದ್ಯಾರ್ಥಿ ಪರೀಕ್ಷೆಗೆ ಗೈರು ಹಾಜರಿಯಾಗಿದ್ದಾರೆ ಎಂದು ಪದವಿ ಪೂರ್ವ ಶಿಕ್ಷಣ ಇಲಾಖೆಯ ಪ್ರಭಾರಿ ಉಪನಿರ್ದೇಶಕರಾದ ಸೋಮಶೇಖರಪ್ಪ ಹೋಕ್ರಾಣಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
6360866626

# ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾ ಮಾನ್ವಿ ತಾಲೂಕ ಘಟಕಕ್ಕೆ ಉಪಾಧ್ಯಕ್ಷರಾಗಿ ರಂಗಪ್ಪ ನಾಯಕ ಉಮಳಿ ಹೊಸೂರು ನಾಯಕ ಆಯ್ಕೆ.



ಧೈರ್ಯದ ದಾರಿ

**ಮಾನ್ವಿ :** ಪಟ್ಟಣದ ಪ್ರವಾಸಿ ಮಂದಿರದಲ್ಲಿ ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾ (ರಿ) ರಾಯಚೂರು ಬಿ. ರಾಮಣ್ಣ ನಾಯಕ ಜಿಲ್ಲಾಧ್ಯಕ್ಷರು, ತಾಲೂಕಾಧ್ಯಕ್ಷರಾದ ದೇವರಾಜ ನಾಯಕ ಹಾಗೂ ಪ್ರಧಾನ ಕಾರ್ಯದರ್ಶಿಯಾದ ಕೊಂಡಯ್ಯ ನಾಯಕರವರ ಆದೇಶದ ಮೇರೆಗೆ ಮಾನವಿ ತಾಲೂಕ ಘಟಕಕ್ಕೆ ತಾಲೂಕ ಉಪಾಧ್ಯಕ್ಷರಾಗಿ ರಂಗಪ್ಪ ನಾಯಕ ಉಮಳಿ ಹೊಸೂರು ಇವರನ್ನು ತಾಲೂಕ ಪ್ರಧಾನ ಕಾರ್ಯದರ್ಶಿ ಎಂದು ನೇಮಕ ಮಾಡಿದ್ದು. ಕೂಡಲೇ ಸಂಘದ ಎಲ್ಲಾ ತತ್ವ ಸಿದ್ಧಾಂತಗಳಿಗೆ ಬದ್ಧರಾಗಿ ಶೈಕ್ಷಣಿಕ, ಆರ್ಥಿಕ, ಹಾಗೂ ಸಂಘಟನೆಯ ಬಲವರ್ಧನೆಗಾಗಿ ಶ್ರಮಿಸಲು ಈ ಮೂಲಕ ತಮಗೆ ಸೂಚಿಸಿ ಆದೇಶಿಸಿದೆ.ನಂತರ ಬಿ ರಾಮಣ್ಣ ನಾಯಕ ಜಿಲ್ಲಾಧಕ್ಷರು ಮಾತನಾಡಿ ನಮ್ಮ ವಾಲ್ಮೀಕಿ ಸಮಾಜ ಅಭಿವೃದ್ಧಿ ಹೊಂದಬೇಕಾದರೆ ಸಾಮಾಜಿಕವಾಗಿ, ಆರ್ಥಿಕವಾಗಿ, ಶೈಕ್ಷಣಿಕವಾಗಿ ಸದೃಢರಾಗಬೇಕು ಎಂದು ಹೇಳಿದರು.

ಆಂಜನೇಯ ನಸಲಾಪುರ ಮಾತನಾಡಿ ಸ್ವಾರ್ಥಕ್ಕಾಗಿ ಸಂಘಟನೆಗೆ ಬರಬೇಡಿ ನಿಸ್ವಾರ್ಥ ಮನೋಭಾವನೆಯನ್ನು ಇಟ್ಟುಕೊಂಡು ಸಂಘಟನೆಗೆ ಬನ್ನಿ. ಸಮಾಜದ ನೊಂದು ಬೆಂದವರಿಗೆ ನೆರಳಾಗಿ ವಾಲ್ಮೀಕಿ ಸಮಾಜಕ್ಕೆ ದೊರೆಯುವ ಸೌಲಭ್ಯಗಳನ್ನು ಸಮಾಜದ ಜನರಿಗೆ ತಿಳಿಸಿ ಎಂದು ಹೇಳಿದರು. ಕಿರು ತೆರೆ ಚಿತ್ರ ನಟರಾದ ರಹೀಮಾನ ಮಾತನಾಡಿ ವಾಲ್ಮೀಕಿ ಸಮಾಜ ಸಹೋದರ ಸಮಾಜದ ಜೊತೆಗೆ ಅನೋನ್ಯ ಭಾಂದವ್ಯದಿಂದ ಕೂಡಿ ಕೊಂಡು ಕಾರ್ಯ ನಿರ್ವಹಿಸುತ್ತದೆ ಎಂದು ಹೇಳಿದರು.ನಂತರ ತಾಲೂಕ ಉಪಾಧ್ಯಕ್ಷರಾಗಿ ಆಯ್ಕೆಯಾದ ರಂಗಪ್ಪ ನಾಯಕಗೆ ಅವರ ಅಭಿಮಾನಿ ಬಳಗ ಸನ್ಮಾನಿಸಿ ಗೌರವಿಸಿದರು.ಈ ಸಂದರ್ಭದಲ್ಲಿ ,ನಾಯ್ಡು ನಾಯಕ,ವಿನೋದ ಕುಮಾರ, ಕೆ.ಸಾಜೀದ ಪಾಷ , ರಮೇಶ ನಾಯಕ,ಈರಪ್ಪ ನಾಯಕ, ದೇವು, ನರಸಿಂಹ ನಾಯಕ, ಅಭಿ,ಚನ್ನಬಸವ ನಾಯಕ, ಹನುಮಂತ ನಾಯಕ, ರಕ್ಷತಾ ನಾಯಕ, ರಾಜು, ಪರಶುರಾಮ್, ಜಯಕುಮಾರ,ಅಂಬಣ್ಣ ನಾಯಕ ಬೆವನೂರು ನಾಯಕ, ಲಚಮಯ್ಯ ನಾಯಕ ,ಅಯ್ಯನಗೌಡ, ರಹಿಮಾನ್,ಅಂಬಣ್ಣ ನಾಯಕ, ಪ್ರದೀಪ್ ನಾಯಕ, ಇತರರರು ಉಪಸ್ಥಿತರಿದ್ದರು.

# ಬೇಸಿಗೆಯಲ್ಲಿ ನೀರಿನ ಅಭಾವ ನೀಗಿಸಲು ಬೋರ್‌ವೆಲ್ ದುರಸ್ತಿಗೆ ಆದೇಶ: ತಹಶೀಲ್ದಾರ್ ಅಶೋಕ್ ಪವಾರ್

ಧೈರ್ಯದ ದಾರಿ

**ಸಿರವಾರ:** ತಾಲೂಕಿನಾದ್ಯಂತ ಈ ವರ್ಷ ಬೇಸಿಗೆಯ ತಾಪ ಹೆಚ್ಚಾಗುವ ಸಾಧ್ಯತೆಯಿದೆ. ಆದ್ದರಿಂದ ಮುಂದಿನ ದಿನಗಳಲ್ಲಿ ಜನತೆಗೆ ಕುಡಿಯುವ ನೀರಿನ ತೊಂದರೆಯಾಗದಂತೆ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು (ಕಆಓ) ಹಾಗೂ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ಈಗಿನಿಂದಲೇ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕೆಂದು ತಹಶೀಲ್ದಾರ್ ಹಾಗೂ ತಾಲೂಕು ದಂಡಾಧಿಕಾರಿ ಅಶೋಕ್ ಪವಾರ್ ಕಟ್ಟುನಿಟ್ಟಿನ ಸೂಚನೆ ನೀಡಿದರು.ಪಟ್ಟಣದ ತಹಶೀಲ್ದಾರ್ ಕಾರ್ಯಾಲಯದಲ್ಲಿ ಕುಡಿಯುವ ನೀರಿನ ಅಭಾವ ನೀಗಿಸುವ ಕುರಿತು ಹಮ್ಮಿಕೊಳ್ಳಲಾಗಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

**ಸಭೆಯ ಪ್ರಮುಖ ನಿರ್ಧಾರಗಳು: ಕೆರೆಗಳನ್ನು ಭರ್ತಿ ಮಾಡುವುದು:** ಈ ತಿಂಗಳ ಕೊನೆಯಲ್ಲಿ ಕುಡಿಯುವ ನೀರಿಗಾಗಿ ನಾಲೆಗಳಿಗೆ ನೀರು ಹರಿಸಲು ಸಂಬಂಧಪಟ್ಟ ನೀರಾವರಿ ಇಲಾಖೆಗೆ ಈಗಾಗಲೇ ಪತ್ರ ಬರೆಯಲಾಗಿದೆ. ನೀರಿನ ಅಭಾವವಿರುವ ಗ್ರಾಮಗಳಲ್ಲಿನ ಕೆರೆಗಳನ್ನು ಮುಂಚಿತವಾಗಿಯೇ ತುಂಬಿಸಿಕೊಳ್ಳಲು ಅಧಿಕಾರಿಗಳು ಜಾಗೃತೆ ವಹಿಸಬೇಕು.

**ಬೋರ್‌ವೆಲ್‌ಗಳ ದುರಸ್ತಿ:** ಪಂಚಾಯಿತಿ ವ್ಯಾಪ್ತಿಯಲ್ಲಿ ಕೆಟ್ಟುಹೋಗಿರುವ ಬೋರ್‌ವೆಲ್‌ಗಳನ್ನು ಕೂಡಲೇ ಸರಿಪಡಿಸಬೇಕು. ಅಗತ್ಯವಿದ್ದಲ್ಲಿ ಬೋರ್‌ವೆಲ್ ಫ್ಲಶಿಂಗ್ ಮಾಡಿಸಬೇಕು.

**ಖಾಸಗಿ ಬೋರ್‌ವೆಲ್‌ಗಳ ಬಳಕೆ:** ತೀವ್ರ ಅಭಾವವಿರುವ ಕಡೆಗಳಲ್ಲಿ ಖಾಸಗಿ ಮಾಲೀಕತ್ವದ ಬೋರ್‌ವೆಲ್‌ಗಳನ್ನು ಬಾಡಿಗೆಗೆ ಪಡೆಯುವ ವ್ಯವಸ್ಥೆ ಮಾಡಿಕೊಳ್ಳಬೇಕು. ಈ ಕೆಲಸದಲ್ಲಿ ಯಾವುದೇ ನೆಪಗಳನ್ನು ಹೇಳಬಾರದು ಎಂದು ಅಧಿಕಾರಿಗಳಿಗೆ ತಾಕೀತು ಮಾಡಿದರು.



**ಅಕ್ರಮ ನೀರು ಬಳಕೆ ವಿರುದ್ಧ ಕ್ರಮ:** ಕುಡಿಯುವ ನೀರಿಗಾಗಿ ಮೀಸಲಿಟ್ಟ ಕೆರೆಯ ನೀರನ್ನು ಟ್ಯಾಂಕರ್ ಮೂಲಕ ಅನಧಿಕೃತವಾಗಿ ಬಳಸುತ್ತಿರುವುದು ಕಂಡುಬಂದಲ್ಲಿ, ಅಂತಹವರ ವಿರುದ್ಧ ಪ್ರಕರಣ ದಾಖಲಿಸಿ ವಾಹನ ಜಪ್ತಿ ಮಾಡಲಾಗುವುದು ಎಂದು ಎಚ್ಚರಿಕೆ ನೀಡಿದರು.

**ಅಧಿಕಾರಿಗಳ ಗೈರುಹಾಜರಿಗೆ ಅಸಮಾಧಾನ:** ಕುಡಿಯುವ ನೀರಿನಂತಹ ಗಂಭೀರ ವಿಷಯದ ಬಗ್ಗೆ ಚರ್ಚಿಸಲು ಕರೆದಿದ್ದ ಈ ಸಭೆಗೆ ಅನೇಕ ಇಲಾಖೆಯ ಅಧಿಕಾರಿಗಳು ಹಾಗೂ ಪಿಡಿಓಗಳು ಗೈರಾಗಿದ್ದರು. ಕೇವಲ ಬೆರಳೆಣಿಕೆಯಷ್ಟು ಅಧಿಕಾರಿಗಳು ಮಾತ್ರ ಹಾಜರಿದ್ದುದಕ್ಕೆ ತಹಶೀಲ್ದಾರರು ಅಸಮಾಧಾನ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಪಟ್ಟಣ ಪಂಚಾಯಿತಿ ಮುಖ್ಯ ಅಧಿಕಾರಿ ಸುರೇಶ್ ಶೆಟ್ಟಿ, ಪಿಡಿಓಗಳಾದ ಬಸವರಾಜ್ ದೊಡ್ಮನೆ, ಮಮತಾ, ಶಾಹಿದ್ .ಪ್ರಸಾದ್, ಕಾರ್ಯದರ್ಶಿ ಈಕಪ್ಪ ಪವಾರ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಕವಿಕಾದಿಂದ ವಿದ್ಯುತ್ ಪರಿವರ್ತಕ ಖರೀದಿ

**ಬೆಂಗಳೂರು,ಮಾ. 9–**ರಾಜ್ಯದಲ್ಲಿ ವಿದ್ಯುತ್ ಸರಬರಾಜು ಕಂಪನಿಗಳಲ್ಲಿ 2024-25ನೇ ಸಾಲಿನಲ್ಲಿ ಕೇರಳ ಎಲೆಕ್ಟ್ರಿಕಲ್ ಮತ್ತು ಅಲೈಡ್ ಇಂಜಿನಿಯರಿಂಗ್ ಕೋ ಲಿಮಿಟೆಡ್, (ಕೆಇಎಲ್) ನಿಂದ ಯಾವುದೇ ಪರಿವರ್ತಕ(ಟ್ರಾನ್ಸ್ ಫಾರ್ಮರ್) ಗಳನ್ನು ಖರೀದಿಸಿರುವುದಿಲ್ಲ ಎಂದು ಇಂಧನ ಸಚಿವ ಕೆ.ಜೆ ಜಾರ್ಜ್ ಅವರು ಮೇಲ್ಮನೆಯಲ್ಲಿ ಸ್ಪಷ್ಟಪಡಿಸಿದ್ದಾರೆ.

ವಿದ್ಯುತ್ ಸರಬರಾಜು ಕಂಪನಿಗಳಲ್ಲಿ 2024-25ನೇ ಸಾಲಿನಲ್ಲಿ ಅವಶ್ಯವಿರುವ ಪರಿವರ್ತಕಗಳನ್ನು ಟೆಂಡರ್ ಮುಖಾಂತರ ಹಾಗೂ 4ಜಿ ವಿನಾಯಿತಿ ಪಡೆಯಲಾದ ಕವಿಕಾ ಸಂಸ್ಥೆಯಿಂದ ಖರೀದಿಸಲಾಗಿದೆ ಎಂದು ಪ್ರಶ್ನೋತ್ತರ ವೇಳೆಯಲ್ಲಿ ಬಿಜೆಪಿಯ ರವಿಕುಮಾರ್ ಅವರ ಪ್ರಶ್ನೆಗೆ ಸಚಿವರು ಉತ್ತರ ನೀಡಿದರು.

ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು ಇಂಧನ ಇಲಾಖೆಗೆ 4ಜಿ ವಿನಾಯಿತಿಗೆ ಅರ್ಜಿ ಸಲ್ಲಿಸುತ್ತಾರೆ. 4ಜಿ ವಿನಾಯಿತಿ ದೊರೆತ ನಂತರ ಪರಿವರ್ತಕಗಳನ್ನು ಸರಬರಾಜು ಮಾಡಲು ಆದೇಶ ನೀಡುವಂತೆ ಕೋರಿ ವಿದ್ಯುತ್ ಸರಬರಾಜು ಕಂಪನಿಗಳಿಗೆ ಪತ್ರಗಳನ್ನು ಸಲ್ಲಿಸುತ್ತಾರೆ ಎಂದು ಹೇಳಿದರು.ವಿದ್ಯುತ್ ಸರಬರಾಜು ಕಂಪನಿಗಳು ಕಾಮಗಾರಿಗಳಿಗೆ ಬೇಕಾಗುವ ಪರಿವರ್ತಕಗಳ ಬೇಡಿಕೆಗನುಗುಣವಾಗಿ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳಿಂದ ಪರಿವರ್ತಕಗಳನ್ನು ಸರಬರಾಜು ಮಾಡಲು ಖರೀದಿ ಆದೇಶ ನೀಡುತ್ತಾರೆ ಎಂದರು.

ಕರ್ನಾಟಕದ ಸಂಸ್ಥೆಗಳಲ್ಲಿ ಅಗತ್ಯ ಪ್ರಮಾಣದಲ್ಲಿ ಸರಬರಾಜು ಲಭ್ಯವಿಲ್ಲದ ಕಾರಣ ಹೆಚ್ಚುವರಿ ಟ್ರಾನ್ಸ್‌ಫಾರ್ಮರ್‌ಗಳನ್ನು ಕೇರಳದಿಂದ ಖರೀದಿ ಮಾಡಬೇಕಾದ ಪರಿಸ್ಥಿತಿ ಉಂಟಾಗಿದೆ ಎಂದು ಹೇಳಿದರು.

ಇದು ಪ್ರಸ್ತುತ ಸರ್ಕಾರದಲ್ಲೇ ನಡೆದಿರುವ ಕ್ರಮವಲ್ಲ, ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲಿಯೂ ಇದೇ ರೀತಿಯ ಖರೀದಿಗಳು ನಡೆದಿವೆ ಎಂದು ಜಾರ್ಜ್ ಹೇಳಿದರು.



ಟೆಂಡರ್ ಪ್ರಕ್ರಿಯೆಯ ಮೂಲಕವೇ ಟ್ರಾನ್ಸ್‌ಫಾರ್ಮರ್‌ಗಳನ್ನು ಖರೀದಿ ಮಾಡಲಾಗುತ್ತದೆ. ಕರ್ನಾಟಕದ ಸಂಸ್ಥೆಗಳಲ್ಲಿ ಅಗತ್ಯ ಪ್ರಮಾಣದಲ್ಲಿ ಸರಬರಾಜು ಲಭ್ಯವಿಲ್ಲದ ಕಾರಣ ಹೆಚ್ಚುವರಿ ಟ್ರಾನ್ಸ್‌ಫಾರ್ಮರ್‌ಗಳನ್ನು ಕೇರಳದಿಂದ ಖರೀದಿ ಮಾಡಬೇಕಾದ ಪರಿಸ್ಥಿತಿ ಉಂಟಾಗಿದೆ ಎಂದು ಸಚಿವರು ವಿವರಿಸಿದರು.

ಕವಿಕಾ (ಕರ್ನಾಟಕ ವಿದ್ಯುತ್ ಕಾರ್ಖಾನೆ ನಿಯಮಿತ) ಸಂಸ್ಥೆಯಲ್ಲಿ ಪ್ರಸ್ತುತ ಸುಮಾರು 15 ಸಾವಿರ ಟ್ರಾನ್ಸ್‌ಫಾರ್ಮರ್ ಉತ್ಪಾದನೆ ನಡೆಯುತ್ತಿದ್ದು, ಅದನ್ನು 30 ಸಾವಿರಕ್ಕೆ ಹೆಚ್ಚಿಸಲಾಗಿದೆ. ಆದರೆ ರಾಜ್ಯದ ಅವಶ್ಯಕತೆ ಸುಮಾರು 50 ಸಾವಿರ ಟ್ರಾನ್ಸ್‌ಫಾರ್ಮರ್‌ಗಳಷ್ಟಿದೆ. ಆದ್ದರಿಂದ ಹೆಚ್ಚುವರಿ ಅಗತ್ಯವನ್ನು ಪೂರೈಸಲು ಕಡಿಮೆ ದರದಲ್ಲಿ ಕೇರಳದ ಸಂಸ್ಥೆಯಿಂದ ಟ್ರಾನ್ಸ್‌ಫಾರ್ಮರ್‌ಗಳನ್ನು ಖರೀದಿ ಮಾಡಲಾಗಿದೆ ಎಂದು ಜಾರ್ಜ್ ಮಾಹಿತಿ ನೀಡಿದರು.

ಇದೇ ವೇಳೆ, ಹಣಕಾಸು ಇಲಾಖೆಯ ಅನುಮತಿ ದೊರೆತರೆ ಮಾತ್ರ ಫೋರ್ ಜಿ ವಿನಾಯಿತಿಯಡಿ ಖರೀದಿ ಪ್ರಕ್ರಿಯೆ ನಡೆಸಲಾಗುತ್ತದೆ ಎಂದು ಕೂಡ ಸಚಿವರು ಸ್ಪಷ್ಟಪಡಿಸಿದರು.

# ಹರಗಿನಡೋಣಿ ಗ್ರಾಮಕ್ಕೆ ಕುಡಿಯುವ ನೀರಿನ ಕೆರೆ ನಿರ್ಮಿಸಲು ಒತ್ತಾಯ




**ಬಳ್ಳಾರಿ, ಮಾ.09–** ಗಣಿಬಾಧಿತ ಪರಿಸರ ಮತ್ತು ಜನ ಬದುಕಿನ ಪುನಶ್ಚೇತನ ಹೋರಾಟ ಸಮಿತಿ. ತಾಲೂಕಿನ ಹರಗಿನಡೋಣಿ ಗ್ರಾಮಕ್ಕೆ ಕುಡಿಯುವ ನೀರಿಗಾಗಿ ಕೆಎಂಇಆರ್ ಸಿ ನಿಧಿಯಿಂದ ಕೆರೆಯನ್ನು ನಿರ್ಮಿಸುವಂತೆ ಒತ್ತಾಯಿಸಿ ಹರಗಿನ ದೋಣಿ ಜನತೆ ಇಂದು ಜಿಲ್ಲಾಧಿಕಾರಿ ಕಚೇರಿ ಮುಂದೆ ಖಾಲಿ ಕೊಡಗಳನ್ನು ಹಿಡಿದು ಘೋಷಣೆ ಕೂಗಿದರು.

ಅಕ್ರಮ ಗಣಿಗಾರಿಕೆಯಿಂದ ಗಣಿಭಾದಿತ ಪ್ರದೇಶದಲ್ಲಿ ವಿಧ್ವಂಸ ಗೊಂಡಿದ್ದ ಜನರ ಬದುಕು ಮತ್ತು ಪರಿಸರ ಪುನಶ್ಚೇತನಗೊ ಳಿಸಲು ರಾಜ್ಯ ಅಥವಾ ಕೇಂದ್ರ ಸರ್ಕಾರ ಸೂಕ್ತ ಕ್ರಮ ಕೈಗೊಂಡಿಲ್ಲ.ಹರಗಿನದೋಣಿ ಜನತೆಗೆ ಕುಡಿಯುವ ನೀರಿಗಾಗಿ ಕೆರೆ ನಿರ್ಮಾಣ ಕೂಡಲೇ ಮಾಡಬೇಕು. ವಸತಿ ಇಲ್ಲದವರಿಗೆ ನಿವೇಶನ ಕೊಟ್ಟು ಮನೆ ಕಟ್ಟಿಸಿ ಕೊಡಬೇಕು. ಗ್ರಾಮದಲ್ಲಿ ಸರ್ಕಾರಿ ಶಾಲೆಯ ಉನ್ನತೀಕರಣ ಮಾಡಿ ಸುಸಜ್ಜಿತ ಶಿಕ್ಷಣ ವ್ಯವಸ್ಥೆ ಮಾಡಬೇಕು. ಗ್ರಾಮದ ನೈರ್ಮಲ್ಯಕ್ಕಾಗಿ ಒಳಚರಂಡಿ, ಸುಜ್ಜಿತ ಸಾರ್ವಜನಿಕ ಶೌಚಾಲಯ ನಿರ್ಮಿಸಬೇಕು. ಮಹಿಳೆಯರಿಗೆ ವಿವಿಧ ಕರಕೌಶಲ್ಯ ತರಬೇತಿಗಳು ನೀಡಿ, ಅವರ ಜೀವನ ಉತ್ತಮಗೊಳಿಸುವ ಉದ್ಯೋಗ ನೀಡಬೇಕು. ಗಣಿಗಾರಿಕೆಯಿಂದ ಹಾಳಾಗಿ ಹೋದ ಪರಿಸರ ಪುನಶ್ಚೇತನಗೊ ಳಿಸಲು, ಅರಣ್ಯ ಬೆಳೆಸುವ ಯೋಜನೆ ತಯಾರಿಸಿ ಗಣಿ ಕಾರ್ಮಿಕರಿಗೆ ಪರ್ಯಾ ಯ ಉದ್ಯೋಗ ಒದಗಿಸಬೇಕು ಎಂದು ಒತ್ತಾಯಿಸಲಾಯ್ತು. ಹೋರಾಟ ಸಮಿತಿಯ ರಾಜ್ಯ ಸಂಚಾಲಕರಾದ ಡಿ. ನಾಗಲಕ್ಷ್ಮಿ, ಸಮಿತಿಯ ಹರಗಿನಡೋಣಿ ಮುಖಂಡರಾದ ಸೋಮಶೇಖರ್ ಗೌಡ, ಚಂದ್ರು, ಎಐಯುಟಿಯುಸಿ ಜಿಲ್ಲಾಧ್ಯಕ್ಷರಾದ ಎ. ದೇವ ದಾಸ್, ಊರಿನ ಮುಖಂಡರಾದ ಬುಗ್ಗೇಶ್, ಶಿವರಾಮ ರೆಡ್ಡಿ, ಹೆಚ್ ರಾಜನ ಗೌಡ್ರು, ಬಸವನ ಗೌಡ, ಬಿ. ಹೆಚ್ ನೀಲ ಮ್ಮ, ಕೆ. ಎಂ. ವೀರಭದ್ರಯ್ಯ ಸ್ವಾಮಿ ಮುಂತಾದವರು ಪಾಲ್ಗೊಂಡಿದ್ದರು.

# ಪ್ರಾಂಶುಪಾಲರ ಮುಂಬಡ್ತಿ ಪ್ರಕ್ರಿಯೆ ಶೀಘ್ರ ಆರಂಭ



**ಬೆಂಗಳೂರು,ಮಾ.9–** ಖಾಲಿಯಿರುವ ಹಾಗೂ ಮುಂಬರುವ 6 ತಿಂಗಳಲ್ಲಿ ಖಾಲಿಯಾಗಲಿರುವ ಪ್ರಾಂಶುಪಾಲರ ಹುದ್ದೆಗಳಿಗೆ ಮುಂಬಡ್ತಿ ನೀಡುವ ಪ್ರಕ್ರಿಯೆಯನ್ನು ಶೀಘ್ರವಾಗಿ ಕೈಗೊಳ್ಳಲಾಗುವುದು ಎಂದು ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಸಚಿವ ಮಧುಬಂಗಾರಪ್ಪ ಅವರು ಮೇಲ್ಮನೆಯಲ್ಲಿ ತಿಳಿಸಿದರು. ಶಾಲಾ ಶಿಕ್ಷಣ ಇಲಾಖೆ (ಸರ್ಕಾರಿ ಪದವಿ ಪೂರ್ವ ಕಾಲೇಜು) ಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅರ್ಹ ಉಪನ್ಯಾಸಕರಿಂದ ವ್ಯಕ್ತಿ ಪೂರ್ವೋತ್ತರ ದಸ್ತಾವೇಜುಗಳು ನಿರ್ದೇಶನಾಲಯದಲ್ಲಿ ಸ್ವೀಕೃತವಾಗಿದ್ದು ಅವುಗಳು ಪರಿಶೀಲನೆಯ ಹಂತದಲ್ಲಿವೆ ಎಂದು ಕಾಂಗ್ರೆಸ್ ನ ಶ್ರೀನಿವಾಸ್ ಅವರ ಪ್ರಶ್ನೆಗೆ ಉತ್ತರ ನೀಡಿದರು.

ಶಾಲಾ ಶಿಕ್ಷಣ ಇಲಾಖೆಯ (ಪದವಿ ಪೂರ್ವ) ಉಪನ್ಯಾಸಕರ ವೃಂದದ ಕರಡು ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಲಾಗಿದ್ದು, ಅದಕ್ಕೆ ಸ್ವೀಕೃತವಾದ 461 ಆಕ್ಷೇಪಣೆಗಳನ್ನು ಪರಿಶೀಲಿಸಿ, ಅಂತಿಮ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಲು ಕ್ರಮವಹಿಸಲಾಗುತ್ತಿದೆ ಎಂದು ಹೇಳಿದರು.

ಉಪನ್ಯಾಸಕರ ಅಂತಿಮ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಿದ ನಂತರ ಸದರಿ ಪಟ್ಟಿಯಾನುಸಾರ ಮತ್ತು ಚಾಲ್ತಿಯಲ್ಲಿರುವ ಸರ್ಕಾರದ ನಿಯಮಗಳನ್ವಯ ನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಇವರು ಪರಿಶೀಲಿಸಿ, ಪ್ರಾಂಶುಪಾಲರ ಹುದ್ದೆಗಳಿಗೆ ಮುಂಬಡ್ತಿ ನಂತರ ನೀಡಲು ಪ್ರಸ್ತಾವನೆಯನ್ನು ಸಲ್ಲಿಸಿದ ನಿಯಮಾನುಸಾರ ಪರಿಶೀಲಿಸಿ ಕ್ರಮವಹಿಸಲಾಗುವುದು ಎಂದು ಹೇಳಿದರು.

1225 ಪ್ರಾಂಶುಪಾಲರ ವೃಂದದ ಹುದ್ದೆಗಳು ಮಂಜೂರಾಗಿದ್ದು, ಇದರಲ್ಲಿ 306 ನೇರ ನೇಮಕಾತಿಗೆ ಮತ್ತು 919 ಬಡ್ತಿಗೆ ಮೀಸಲಿರುತ್ತವೆ. ನೇರ ನೇಮಕಾತಿಯ 306 ಹುದ್ದೆಗಳ ಪೈಕಿ 247 ಹುದ್ದೆಗಳನ್ನು ಸೇವಾ ನಿರತ ಉಪನ್ಯಾಸಕರಿಗೆ ಸ್ಪರ್ಧಾತ್ಮಕ ಪರೀಕ್ಷೆ ನಡೆಸುವ ಮೂಲಕ ಆಯ್ಕೆ ಪ್ರಕ್ರಿಯೆಗಾಗಿ ಪ್ರಸ್ತಾವನೆ ಸಲ್ಲಿಸಲಾಗಿರುತ್ತದೆ ಎಂದು ತಿಳಿಸಿದರು.

ಇನ್ನುಳಿದಂತೆ ಪ್ರಸ್ತುತ ಬಡ್ತಿ ಕೋಟಾದಡಿ ಖಾಲಿ ಇರುವ ಹಾಗೂ ಮುಂಬರುವ 6 ತಿಂಗಳಲ್ಲಿ ಖಾಲಿಯಾಗಲಿರುವ ವಾಂಶುಪಾಲರ ಹುದ್ದೆಗಳಿಗೆ ಶಾಲಾ ಶಿಕ್ಷಣ ಇಲಾಖೆ(ಸರ್ಕಾರಿ ಪದವಿ ಪೂರ್ವ ಕಾಲೇಜು) ಕಾರ್ಯನಿರ್ವಹಿಸುತ್ತಿರುವ ಅರ್ಹ ಉಪನ್ಯಾಸಕರಿಗೆ ಮುಂಬಡ್ತಿ ನೀಡಲು ನಿಯಮಾನುಸಾರ ಕ್ರಮವಹಿಸಲಾಗುವುದು ಎಂದು ಹೇಳಿದರು.

ಪ್ರಸ್ತುತ ಖಾಲಿಯಿರುವ 561 ಪ್ರಾಂಶುಪಾಲರ ಹುದ್ದೆಗಳಿಗೆ ಆಯಾ ಕಾಲೇಜಿನ ಹಿರಿಯ ಉಪನ್ಯಾಸಕರುಗಳನ್ನು ಕರ್ನಾಟಕ ನಾಗರಿಕ ಸೇ ನಿಯಮಗಳ ನಿಯಮ-68 ರಡಿ ಪ್ರಾಂಶುಪಾಲರ ಹುದ್ದೆಗೆ ಪ್ರಭಾರದಲ್ಲಿರಿಸಿ ಶೈಕ್ಷಣಿಕ, ಆಡಳಿತಾತ್ಮಕ ಚಟುವಟಿಕೆ ಮತ್ತು ಪರೀಕ್ಷಾ ಕಾರ್ಯಗಳಿಗೆ ತೊಂದರೆ ಉಂಟಾಗದಂತೆ ಕ್ರಮವಹಿಸಲಾಗುತ್ತಿದೆ ಎಂದು ಹೇಳಿದರು.

ಶಾಲಾ ಶಿಕ್ಷಣ ಇಲಾಖೆಯ (ಪದವಿ ಪೂರ್ವ ಉಪನ್ಯಾಸಕರ ವೃಂದದ ಕರಡು ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಲಾಗಿದ್ದು, ಅದಕ್ಕೆ ಸ್ವೀಕೃತವಾದ 461 ಆಕ್ಷೇಪಣೆಗಳನ್ನು ಪರಿಶೀಲಿಸಿ, ಅಂತಿಮ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಲು ಜೇಷ್ಠತಾ ಪಟ್ಟಿ ಅಂತಿಮಗೊಂಡ ನಂತರ ಉಪನ್ಯಾಸಕರ ವೃಂದದಿಂದ ಪ್ರಾಂಶುಪಾಲರ ವೃಂದಕ್ಕೆ ಬಡ್ತಿ ನೀಡುವ =ಬಗ್ಗೆ ಚಾಲ್ತಿಯಲ್ಲಿರುವ ಸರ್ಕಾರದ ನಿಯಮಗಳನ್ವಯ ಪರಿಶೀಲಿಸಿ, ಅಗತ್ಯ ಕ್ರಮವಹಿಸಲಾಗುವುದು ಎಂದು ತಿಳಿಸಿದರು.

# ಸಿ.ಎಂ.ಸಿದ್ದರಾಮಯ್ಯ ಮಂಡಿಸಿದ ಬಜೆಟ್, ಖಾಲಿ ಚಂಬು, ಅದರಲ್ಲಿ ಏನು ಇಲ್ಲ : ಮೀನಳ್ಳಿ ತಾಯಣ್ಣ

**ಬಳ್ಳಾರಿ, ಮಾ.09**: ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಂಡಿಸಿದ ಬಜೆಟ್ ನಲ್ಲಿ ಏನೂ ಇಲ್ಲ, ಇದರಲ್ಲಿ ಉಪ್ಪು, ಹುಳಿ, ಖಾರ ಏನೂ ಇಲ್ಲ, ಬರಿ ಖಾಲಿ ಚಂಬು ಎಂದು ಜೆಡಿಎಸ್ ಜಿಲ್ಲಾಧ್ಯಕ್ಷ ಮೀನಳ್ಳಿ ತಾಯಣ್ಣ ಅವರು ಹೇಳಿದ್ದಾರೆ. ಈ ಕುರಿತು ಹೇಳಿಕೆ ನೀಡಿದ ಅವರು, ಸಿ.ಎಂ.ಸಿದ್ದರಾಮಯ್ಯ ಅವರ ನೇತೃತ್ವದ ರಾಜ್ಯ ಕಾಂಗ್ರೆಸ್ ಸರ್ಕಾರ, ಪಂಚ ಗ್ಯಾರಂಟಿ ಯೋಜನೆ ಗಳಿಗೆ ಹಣ ಹಿಂಡಿಸಲಾಗದೆ ಹೆಣಗಾಡುತ್ತಿದೆ, ಇದನ್ನು ಸರಿಪಡಿಸಲು, ನೋಂದಣಿ ಕಚೇರಿಯಲ್ಲಿ ಶುಲ್ಕ ಹೆಚ್ಚಳ, ವಿದ್ಯುತ್ ದರ ಏರಿಕೆ, ಹಾಲು ಹಾಗೂ ಅದರ ಉತ್ಪನ್ನಗಳ ದರ ಏರಿಕೆ ಸೇರಿದಂತೆ ಅಗತ್ಯ ವಸ್ತುಗಳ ಬೆಲೆ ಏರಿಕೆ ಮಾಡಿ, ಬಡ ಜನರ ನೆಮ್ಮದಿ ಹಾಳು ಮಾಡುತ್ತಿದೆ. ಸರ್ಕಾರದ ಖಜಾನೆ ಖಾಲಿಯಾಗಿದ್ದು, ಸಿ.ಎಂ.ಸಿದ್ದರಾಮಯ್ಯ ಅವರು, 4.5 ಲಕ್ಷ ಕೋಟಿ ರೂ.ಬಜೆಟ್ ಮಂಡಿಸಿದ್ದಾರೆ. ರೈತರಿಗೆ, ಮಹಿಳೆ ಯರಿಗೆ, ವೃದ್ಧರಿಗೆ, ಯುವಕ, ಯುವತಿಯರಿಗೆ ಯಾವುದೇ ಕೊಡುಗೆಗಳನ್ನು ನೀಡಿಲ್ಲ, ನಿರುದ್ಯೋಗ ವಿದ್ಯಾವಂತರು ಸಾಕಷ್ಟು ಜನರಿದ್ದು, ಉದ್ಯೋಗ ಕ್ಕಾಗಿ ಹರಸಾಹ ಪಡುತ್ತಿದ್ದಾರೆ. ಅರ್ಹ ವಿದ್ಯಾವಂತರು ಸರ್ಕಾರಿ ಉದ್ಯೋಗ ಕ್ಕಾಗಿ ಅರ್ಜಿ ಹಾಕಿ ಹಾಕಿ, ಹೈರಾಣರಾಗಿದ್ದು, ನೇಮಕ ಪ್ರಕ್ರಿಯೆಗೆ ಸರ್ಕಾರ ಇಲ್ಲಿವರೆಗೆ ಮುಂ ದಾಗಿಲ್ಲ, ನಾನಾ ಅಭಿವೃದ್ಧಿ ಕೆಲಸ ಕಾರ್ಯ ಗಳನ್ನು ಮಾಡಿದ ರಾಜ್ಯದ ಗುತ್ತಿಗೆದಾರರಿಗೆ ರಾಜ್ಯ ಕಾಂಗ್ರೆಸ್ ಸರ್ಕಾರ ಹಣ ಪಾವತಿಸಿಲ್ಲ, ಸಾವಿರಾರು ಕೋಟಿ ಹಣ ಪಾವತಿ ಮಾಡಬೇಕಾಗಿದ್ದು, ಅನಿವಾರ್ಯವಾಗಿ ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ಗುತ್ತಿಗೆದಾರರು ಸಿಡಿದೆದ್ದಿದ್ದಾರೆ. ಸರ್ಕಾರ ಕೇವಲ ಭರವಸೆ ನೀಡುವುದರಲ್ಲಿ ಕಾಲಹರಣ ಮಾಡುತ್ತಿದೆ, ಹೊರತು ಇಲ್ಲಿವರೆಗೆ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ವಾಗ್ದಾಳಿ ನಡೆಸಿದ್ದಾರೆ. ಬಜೆಟ್ ನಲ್ಲಿ ಮಕ್ಕಳಿಗೆ ಸೋಶಿಯಲ್ ಮೀಡಿಯ ಬ್ಯಾನ್ ಮಾಡಿರುವುದು ಒಳ್ಳೆಯ ಕೆಲಸ, ಇದನ್ನು ಸ್ವಾಗತಿಸುವೆ. ಲಕ್ಷಾಂತರ ರೈತರ ಜೀವನಾಡಿ ತುಂಗಭದ್ರಾ ಜಲಾಶಯದ 33 ಗೇಟ್ ಗಳನ್ನು ಮುಂಗಾರು ಮುನ್ನವೇ ಬದಲಾಯಿಸುವ ನಿರ್ಧಾರವನ್ನು ಸ್ವಾಗತಿಸುವೆ. ಆದರೆ, ಮುಖ್ಯವಾಗಿ ಮಕ್ಕಳ ಶಿಕ್ಷಣ, ಆರೋಗ್ಯ, ವಿದ್ಯಾವಂತರಿಗೆ ನೌಕರಿ ಭಾಗ್ಯ, ಬಡವರಿಗೆ ಅನುಕೂಲವಾಗುವ ಯೋಜನೆಗಳು ಸೇರಿದಂತೆ ಕನಿಷ್ಠ ಮೂಲ ಸೌಕರ್ಯಕ್ಕಾಗಿ ಯಾವುದೇ ಯೋಜನೆಗಳನ್ನು ಬಜೆಟ್ ನಲ್ಲಿ ಪ್ರಕಟಿಸಿಲ್ಲ, ಸಿ.ಎಂ.ಸಿದ್ದರಾಮಯ್ಯ ಅವರು ಮಂಡಿಸಿದ ಬಜೆಟ್ ಖಾಲಿ ಚಂಬು ಇದ್ದಂತೆ ಎಂದು ವಾಗ್ದಾಳಿ ನಡೆಸಿದ್ದಾರೆ.

# ಐತಿಹಾಸಿಕ 204ನೇ ಶರಣಬಸವೇಶ್ವರ ಯಾತ್ರೆಗೆ ಸಾಕ್ಷಿಯಾದ ಸಹಸ್ರಾರು ಭಕ್ತರು





**ಕಲಬುರಗಿ:ಮಾ.9–** 18ನೇ ಶತಮಾನದ ಸಂತ ಶ್ರೀ ಶರಣಬಸವೇಶ್ವರರ 204ನೇ ಪುಣ್ಯತಿಥಿ ಸ್ಮರಣಾರ್ಥ ಕಲಬುರಗಿ ನಗರದ ವಿಶಾಲವಾದ ಶರಣಬಸವೇಶ್ವರ ದೇವಾಲಯ ಸಂಕೀರ್ಣದಲ್ಲಿ ಭಾನುವಾರ ನಡೆದ ಐತಿಹಾಸಿಕ ಶರಣಬಸವೇಶ್ವರ ಯಾತ್ರಾ ಮಹೋತ್ಸವದ ರಥೋತ್ಸವಕ್ಕೆ ದೇಶಾದ್ಯಂತ ಮತ್ತು ವಿದೇಶಗಳಿಂದ ಬಂದ ಸಾವಿರಾರು ಭಕ್ತರು ಸಾಕ್ಷಿಯಾದರು.

ಶರಣಬಸವೇಶ್ವರ ಸಂಸ್ಥಾನದ 8ನೇ ಮಹಾದಾಸೋಹ ಪೀಠಾಧಿಪತಿ ಲಿಂಗೈಕ್ಯ ಪೂಜ್ಯ ಡಾ. ಶರಣಬಸವಪ್ಪ ಅಪ್ಪಾಜಿಯವರ ಸುಧೀರ್ಘ 42 ವರ್ಷಗಳ ಆಡಳಿತ ನೀಡಿ, ಕಳೆದ ವರ್ಷ ಆಗಸ್ಟ್ 14ರಂದು ಇಹಲೋಕ ತ್ಯಜಿಸಿದ ಅವರು ಇದೇ ಮೊದಲ ಬಾರಿಗೆ, ಲಿಂಗೈಕ್ಯ ಪೂಜ್ಯ ಡಾ. ಅಪ್ಪಾಜಿಯವರ ಪುತ್ರ ಮತ್ತು ಬಾಲ ಪ್ರತಿಭೆಯಾದ 9ನೇ ಮಹಾದಾಸೋಹ ಪೀಠಾಧಿಪತಿ ಪೂಜ್ಯ ದೊಡ್ಡಪ್ಪ ಅಪ್ಪಾಜಿಯವರು, ಶರಣಬ ಸವೇಶ್ವರ ವಿದ್ಯಾವರ್ಧಕ ಸಂಘದ ಅಧ್ಯಕ್ಷರಾದ ಮಾತೋಶ್ರೀ ಪೂಜ್ಯ ಡಾ. ದಾಕ್ಷಾಯಿಣಿ ಅವ್ವಾಜಿ ಅವರ ಮಾರ್ಗದರ್ಶನದಲ್ಲಿ ಮತ್ತು ಸಂಘದ ಕಾರ್ಯದರ್ಶಿ ಶ್ರೀ ಬಸವರಾಜ ದೇಶಮುಖ ಅವರ ಸಹಾಯದಿಂದ ಪ್ರಸಿದ್ಧ ರಥೋತ್ಸವದ ಉದ್ಘಾಟನೆಗೆ ಮುಂಚಿತವಾಗಿ ಎಲ್ಲಾ ಧಾರ್ಮಿಕ ವಿಧಿವಿಧಾನಗಳನ್ನು ಪೂರ್ಣಗೊಳಿಸಿದರು.

ಸಂತರ ಪುಣ್ಯತಿಥಿಯನ್ನು ಭಕ್ತರು ದಿನವಿಡೀ ಉಪವಾಸ ಮಾಡುವ ಮೂಲಕ ಪವಿತ್ರ ದಿನವೆಂದು ಆಚರಿಸುತ್ತಾರೆ ಮತ್ತು ರಥೋತ್ಸವದ ನಂತರ ಸಿಹಿತಿಂಡಿಗಳು ಸೇರಿದಂತೆ ವಿಶೇಷವಾಗಿ ತಯಾರಿಸಿದ ಭಕ್ಷ್ಯಗಳನ್ನು ಸೇವಿಸುತ್ತಾರೆ. (ಲಿಂಗಾಯತರು ಸಾವನ್ನು ಮೋಕ್ಷವೆಂದು ವೈಭವೀಕರಿಸುತ್ತಾರೆ ಮತ್ತು ಆಚರಿಸುತ್ತಾರೆ ಹಾಗೂ ಧಾರ್ಮಿಕ ಮುಖ್ಯಸ್ಥರ ಪುಣ್ಯತಿಥಿಗಳನ್ನು ಭಕ್ತರು ವಿಶೇಷ ಹಬ್ಬವಾಗಿ ಆಚರಿಸುತ್ತಾರೆ).

ಅರಣ್ಯ ಮತ್ತು ಪರಿಸರ ಖಾತೆ ಸಚಿವ ಶ್ರೀ ಈಶ್ವರ್ ಖಂಡ್ರೆ ಅವರು ಸಂಸ್ಥಾನಕ್ಕೆ ದೇಣಿಗೆ ನೀಡಿದ ಅಮೂಲ್ಯವಾದ "ಕರುಂಗಲಿ" ಮರವನ್ನು ಬಳಸಿ ಹೊಸದಾಗಿ ನಿರ್ಮಿಸಲಾದ ಆರು ಅಂತಸ್ತಿನ ರಥವನ್ನು ವರ್ಣರಂಜಿತವಾಗಿ ಹಾಗೂ ಬಹು ಸುಂದರವಾಗಿ ಅಲಂಕರಿಸಲಾಗಿದೆ. ದೇವಾಲಯದ ಉತ್ಸಾಹಿ ಭಕ್ತರು ದೇವಾಲಯ ಸಂಕೀರ್ಣದ ಸುತ್ತಲೂ ಶರಣಬಸವೇಶ್ವರನನ್ನು ಸ್ತುತಿಸುವ ಘೋಷಣೆಗಳ ನಡುವೆ ಭಕ್ತಿಪೂರ್ವಕವಾಗಿ ರಥವನ್ನು ಎಳೆದರು. ಆಚರಣೆಯಲ್ಲಿ ಭಾಗವಹಿಸಲು ಆಗಮಿಸಿದ ಶ್ರೀ ಈಶ್ವರ್ ಖಂಡ್ರೆ ಅವರನ್ನು ರಥದ ಬಳಿ ಪೂಜ್ಯ ದೊಡ್ಡಪ್ಪ ಅಪ್ಪಾಜಿ ಸನ್ಮಾನಿಸಿದರು. ಈ ವರ್ಷದ ಯಾತ್ರೆಯ ವಿಶೇಷ ಆಕರ್ಷಣೆಯೆಂದರೆ ರಥವನ್ನು ಎಳೆದ ನಂತರ ಅದನ್ನು ನಿಲ್ಲಿಸುವ ಸ್ಥಳದ ಪಕ್ಕದಲ್ಲಿ ಲಿಂಗೈಕ್ಯ ಪೂಜ್ಯ ಶರಣಬಸವಪ್ಪ ಅಪ್ಪಾಜಿಯ 30 ಅಡಿ ಎತ್ತರದ ಪ್ರಕಾಶಿತ ಕಟ್ ಔಟ್ ನಿರ್ಮಿಸಲಾಗಿದೆ.

ಶರಣಬಸವೇಶ್ವರ ದೇವಾಲಯದಲ್ಲಿರುವ "ಗದ್ದುಗೆ"ಗೆ ಪೂಜೆ ಸಲ್ಲಿಸಲು ಬೆಳಗಿನ ಜಾವದಿಂದಲೇ ದೇವಾಲಯ ಸಂಕೀರ್ಣದಲ್ಲಿ ಸೇರಿದ್ದ ಭಕ್ತ ಸಮೂಹವು ರಥೋತ್ಸವವನ್ನು ವೀಕ್ಷಿಸಲು ಅನುಕೂಲಕರ ಸ್ಥಾನವನ್ನು ಆಕ್ರಮಿಸಿಕೊಂಡಿತು. ದೇಶದಾದ್ಯಂತ ಭಕ್ತರಿಂದ ದೇವಾಲಯ ಸಂಕೀರ್ಣವು ತುಂಬಿ ತುಳುಕುತ್ತಿತ್ತು. ಭಾರೀ ಜನದಟ್ಟಣೆಯಿಂದಾಗಿ ದೇವಾಲಯಕ್ಕೆ ಪ್ರವೇಶ ಪಡೆಯಲು ಸಾಧ್ಯವಾಗದ ಭಕ್ತರು ರಸ್ತೆ ಮತ್ತು ದೇವಾಲಯದ ಎದುರಿನ ಯಾತ್ರಾ ಮೈದಾನಕ್ಕೆ ನುಗ್ಗಿದರು. ರಥವನ್ನು ಎಳೆಯುವಾಗ ಭಕ್ತರು ಬಾಳೆಹಣ್ಣು ಮತ್ತು ಖರ್ಜೂರವನ್ನು ಎಸೆದು ನಮಸ್ಕರಿಸಿದರು. ರಥೋತ್ಸವ ಪ್ರಾರಂಭವಾಗುತ್ತಿದ್ದಂತೆಯೇ ರಥದ ಮೇಲೆ ಬಹು-ಬಣ್ಣದ ವಿದ್ಯುತ್ ದೀಪಗಳು ಚಿಮ್ಮಿ ಝಗಮಗಿಸಿದ್ದು ಆಚರಣೆಗೆ ಮೆರುಗು ನೀಡಿತು.

ರಥವನ್ನು ಎಳೆಯುವ ಮೊದಲು, ಪೂಜ್ಯ ದೊಡ್ಡಪ್ಪ ಅಪ್ಪಾಜಿ, ಸಂಘದ ಕಾರ್ಯದರ್ಶಿ ಶ್ರೀ ಬಸವರಾಜ ದೇಶಮುಖ ಮತ್ತು ಡಾ. ಅಲ್ಲಮಪ್ರಭು ದೇಶಮುಖ ಅವರ ಸಹಾಯದಿಂದ 200 ವರ್ಷಗಳ ಹಿಂದೆ ಸಂತ ಶರಣಬಸವೇಶ್ವರರು ಬೆಳಗಿಸಿದ ನಂದಾದೀಪಕ್ಕೆ ಪೂಜೆ ಸಲ್ಲಿಸಿ, ರುಚಿಕರವಾಗಿ ತಯ್ಯಾರಿಸಿದ ವಿಶೇಷ "ನೈವೈದ್ಯ"ವನ್ನು ಅರ್ಪಿಸಿದರು. ಅಲಂಕರಿಸಿದ ರಥವನ್ನು ಸುತ್ತಿ ರಥಕ್ಕೆ ಪೂಜೆ ಸಲ್ಲಿಸಿದರು. ಪೂಜ್ಯ ಅಪ್ಪಾಜಿ ಮತ್ತು ಅವರ ತಾಯಿ ಮಾತೋಶ್ರೀ ಪೂಜ್ಯ ಡಾ. ದಾಕ್ಷಾಯಿಣಿ ಅವ್ವಾಜಿ ಮತ್ತು ಅವರ ಸಹೋದರಿಯರಾದ ಕು. ಭವಾನಿ ಎಸ್. ಅಪ್ಪ, ಕು. ಶಿವಾನಿ ಎಸ್. ಅಪ್ಪ, ಮತ್ತು ಕು. ಮಹೇಶ್ವರಿ ಎಸ್. ಅಪ್ಪ, ಶ್ರೀ ಬಸವರಾಜ ದೇಶಮುಖ, ಡಾ. ಅಲ್ಲಮಪ್ರಭು ದೇಶಮುಖ ಅವರೊಂದಿಗೆ ದೇವಾಲಯದ ಪಕ್ಕದಲ್ಲಿರುವ ದಾಸೋಹ ಮಹಾಮನೆಯಲ್ಲಿ ವಿಶೇಷವಾಗಿ ನಿರ್ಮಿಸಲಾದ ಆವರಣದಲ್ಲಿ ಮೂರು ಬಾರಿ ಶಂಖವನ್ನು ಊದಿದರು. ಅಪ್ಪಾಜಿ ಕುಟುಂಬದ ಆಪ್ತ ಸಂಬಂಧಿಕರು ಮತ್ತು ಶರಣಬಸವ ವಿಶ್ವವಿದ್ಯಾಲಯದ ಉಪಕುಲಪತಿ ಪ್ರೋ. ಅನಿಲ ಕುಮಾರ ಬಿಡವೆ, ಕುಲಸಚಿವರಾದ ಡಾ. ಲಕ್ಷ್ಮಿ ಪಾಟೀಲ್ ಮಾಕಾ ಸೇರಿದಂತೆ ಪ್ರಮುಖ ಹಾಗೂ ಗಣ್ಯ ವ್ಯಕ್ತಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ಐತಿಹಾಸಿಕ ಕ್ಷಣವನ್ನು ವೀಕ್ಷಿಸಲು ದೇವಾಲಯ ಸಂಕೀರ್ಣದಲ್ಲಿ ನೆರೆದಿದ್ದ ಸಾವಿರಾರು ಭಕ್ತರಿಗೆ ಪೂಜ್ಯ ದೊಡ್ಡಪ್ಪ ಅಪ್ಪ ಅವರು ಪ್ರಸಾದ ಬಟ್ಟಲು (ಸಂತ ಶರಣಬಸವೇಶ್ವರರು ತಮ್ಮ ಭೋಜನವನ್ನು ಸೇವಿಸುತ್ತಿದ್ದ ಬೆಳ್ಳಿ ತಟ್ಟೆ) ಮತ್ತು ಲಿಂಗ ಸಜ್ಜಿಕೆ (ಸಂತರು ಧರಿಸಿದ್ದ ಶ್ರೀಗಂಧದ ಮರದ ಪೆಟ್ಟಿಗೆಯಲ್ಲಿ ಇರಿಸಲಾದ ಪವಿತ್ರ ಲಿಂಗ) ವನ್ನು ಭಕ್ತಾದಿಗಳಿಗೆ ಪ್ರದರ್ಶಿಸಿದರು.

ರಥೋತ್ಸವದ ವೈಭವವೆಂದರೆ ಇಡೀ ಕಲಬುರಗಿ ನಗರವು ಹೂವಿನ ಹಾರಗಳಿಂದ ಸಿಂಗರಿಸಿಕೊಂಡು ಹಬ್ಬದ ವಾತಾವರಣದಿಂದ ಕೂಡಿತ್ತು. ಲಿಂಗೈಕ್ಯ ಡಾ. ಅಪ್ಪಾಜಿ ಮತ್ತು ಪೂಜ್ಯ ದೊಡ್ಡಪ್ಪ ಅಪ್ಪಾಜಿ ಅವರ ಬೃಹತ್ ಬ್ಯಾನರ್‌ಗಳನ್ನು ನಗರದಾದ್ಯಂತ ಕಂಡುಬಂದವು. ಸಂತ ಶರಣಬಸವೇಶ್ವರರು ಬೋಧಿಸಿದ ಮತ್ತು ಆಚರಿಸಿದ ದಾಸೋಹದ ಸಂಪ್ರದಾಯಗಳಿಗೆ ಅನುಗುಣವಾಗಿ, ಇಡೀ ನಗರವು ದಾಸೋಹ ಮಹಾಮನೆಯಾಗಿ ರೂಪಾಂತರಗೊಂಡಿತ್ತು. ಜನರು ಶರಣಬಸವೇಶ್ವರ ದೇವಾಲಯಕ್ಕೆ ಹೋಗುವ ಎಲ್ಲಾ ರಸ್ತೆಗಳಲ್ಲಿ ಪೆಂಡಾಲ್‌ಗಳು ಮತ್ತು ವಿಶೇಷ ಮಳಿಗೆಗಳನ್ನು ಸ್ಥಾಪಿಸಿ ಅನ್ನ ಸಂತರ್ಪಣೆಗೈದರು.

ಸಂತ ಶರಣಬಸವೇಶ್ವರರ ಕಟ್ಟಾ ಭಕ್ತರು ರಾಯಚೂರು, ವಿಜಯಪುರ, ಬೀದರ್ ಸೇರಿದಂತೆ ನೆರೆಯ ದೂರದ ಜಿಲ್ಲೆಗಳಿಂದ ಮತ್ತು ಮಹಾರಾಷ್ಟ್ರ ಹಾಗೂ ಆಂಧ್ರಪ್ರದೇಶದ ಗಡಿ ಜಿಲ್ಲೆಗಳಿಂದ ಸೇರಿದಂತೆ ತಮ್ಮ ತಮ್ಮ ಹಳ್ಳಿಗಳಿಂದ ಮೈಲುಗಟ್ಟಲೆ ನಡೆದುಕೊಂಡು ದೇವಾಲಯಕ್ಕೆ ಬಂದು ತಾವು ಶರಣಬಸವೇಶ್ವರರಿಗೆ ಬೇಡಿಕೊಂಡ ಬಯಕೆಗಳನ್ನು ಈಡೇರಿಸಿಕೊಳ್ಳುತ್ತಾರೆ ಮತ್ತು ನಿಸ್ವಾರ್ಥ ಸೇವೆಗೆ ಮಾದರಿಯಾಗಿದ್ದ ಹಾಗೂ ತಮ್ಮ ಜೀವಿತಾವಧಿಯಲ್ಲಿ ಭಕ್ತರಿಗೆ ಭರವಸೆ ಮತ್ತು ಮೋಕ್ಷದ ದಾರಿದೀಪವಾಗಿದ್ದ ಸಂತನಿಗೆ ನಮನ ಸಲ್ಲಿಸುತ್ತಾರೆ.

ಸಾಂಪ್ರದಾಯಿಕ ಆಚರಣೆಯಾದ ಮತ್ತು ಹೊಸದಾಗಿ ರಾಶಿ ಮಾಡಿದ ಜೋಳದಿಂದ ತಯಾರಿಸಿದ ವಿಶೇಷ ಖಾದ್ಯವಾದ "ಹುಳಿಬಾನ"ವನ್ನು ಒಳಗೊಂಡಿರುವ ವಿಶೇಷವಾಗಿ ತಯಾರಿಸಿದ "ನೈವೇದ್ಯ"ವನ್ನು ದೇವರಿಗೆ ಅರ್ಪಿಸುವುದು ವಾಡಿಕೆ. ಇದನ್ನು ಹಸುವಿನ ಹಾಲಿನಿಂದ ತಯಾರಿಸಿದ ತಾಜಾ ಮೊಸರಿನೊಂದಿಗೆ ಬೆರೆಸಿ ಇತರ ಪದಾರ್ಥಗಳನ್ನು ಇದರಲ್ಲಿ ಸೇರಿಸಲಾಗುತ್ತದೆ. ರಥ ಎಳೆಯುವ ಮೊದಲು "ಹುಳಿಬಾನ"ವನ್ನು ತಲೆಯ ಮೇಲೆ ಹೊತ್ತುಕೊಂಡು ದೇವಾಲಯದ ಸುತ್ತಲೂ ಮತ್ತು ರಥದ ಸುತ್ತಲೂ ಐದು ಬಾರಿ ಪ್ರದಕ್ಷಣೆ ಹಾಕಲಾಗುತ್ತದೆ.

ದೇವಾಲಯ ಸಂಕೀರ್ಣದೊಳಗಿನ ಭದ್ರತಾ ವ್ಯವಸ್ಥೆಗಳು ಪರಿಪೂರ್ಣವಾಗಿದ್ದು, ಯಾವುದೇ ಅಹಿತಕರ ಘಟನೆಗಳನ್ನು ತಡೆಗಟ್ಟಲು ಬಂದೋಬಸ್ತ ಮಾಡಲಾಗಿತ್ತು. ಗುರುತಿಸಲಾದ ಭಕ್ತರು ಮತ್ತು ಸ್ವಯಂಸೇವಕರ ವಿಶೇಷ ಗುಂಪು ಸೇರಿಕೊಂಡು ರಥವನ್ನು ಎಳೆಯುವ ಮಾರ್ಗವನ್ನು ಪೊಲೀಸರೊಂದಿಗೆ ಕೂಡಿ ಬ್ಯಾರಿಕೇಡ್‌ಗಳಿಂದ ಮುಚ್ಚಿದ್ದರು. ರಥೋತ್ಸವವನ್ನು ಕ್ರಮಬದ್ಧವಾಗಿ ವೀಕ್ಷಿಸುವುದನ್ನು ಖಚಿತಪಡಿಸಿಕೊಳ್ಳಲು ಶರಣಬಸವೇಶ್ವರ ದೇವಾಲಯ ಸಂಕೀರ್ಣದ ಒಳಗೆ ಮತ್ತು ಹೊರಗೆ ನೂರಾರು ಪೊಲೀಸ್ ಸಿಬ್ಬಂದಿ ಮತ್ತು ಗೃಹರಕ್ಷಕ ದಳದವರನ್ನು ನಿಯೋಜಿಸಲಾಗಿತ್ತು.

ರಥೋತ್ಸವಕ್ಕೆ ಸಾಕ್ಷಿಯಾದ ಇತರ ಪ್ರಮುಖರಲ್ಲಿ ಮಾಜಿ ಸುಪ್ರೀಂ ಕೋರ್ಟ್ ನ್ಯಾಯಾಧೀಶ ಶ್ರೀ ನ್ಯಾಯಮೂರ್ತಿ ಶಿವರಾಜ್ ಪಾಟೀಲ್, ಹಿರಿಯ ವೈದ್ಯ ಹಾಗೂ ಪ್ರಸಿದ್ಧ ಆಂಕೊಲಾಜಿಸ್ಟ್ ಡಾ. ಶೇಖರ್ ಪಾಟೀಲ್, ಕಲಬುರಗಿ ದಕ್ಷಿಣ ಶಾಸಕ ಅಲ್ಲಮಪ್ರಭು ಪಾಟೀಲ್, ಬಿಜೆಪಿ ಎಂಎಸಿಗಳಾದ ಬಿ.ಜಿ. ಪಾಟೀಲ್, ಶಶೀಲ್ ಜಿ. ನಮೋಶಿ, ಮಾಜಿ ಶಾಸಕ ಶ್ರೀ ದತ್ತಾತ್ರೇಯ ಪಾಟೀಲ್ ರೇವೂರ್, ಪೊಲೀಸ್ ಆಯುಕ್ತ ಶ್ರೀ ಶರಣಪ್ಪ ಢಗೆ ಮತ್ತು ಇತರ ಗಣ್ಯರು ರಥೋತ್ಸವದಲ್ಲಿ ಪಾಲ್ಗೊಂಡಿದ್ದರು.

# ಬೆಲೆ ಏರಿಕೆ ಬಿಜೆಪಿಯವರ ಸಾಧನೆಯಾದರೆ, ಕಾಂಗ್ರೆಸ್ ನವರದ್ದು ಪಂಚ ಗ್ಯಾರಂಟಿಗಳ ಸಾಧನೆ

**ಚಿತ್ತಾಪುರ;ಮಾ.9:** ಬಿಜೆಪಿಯವರು ಪ್ರತಿನಿತ್ಯ ಒಂದಲ್ಲ ಒಂದು ವಸ್ತುಗಳ ಬೆಲೆ ಏರಿಸುವ ಮೂಲಕ ಅದನ್ನೆ ಸಾಧನೆ ಎಂದು ತೋರಿಸಿಕೊಳ್ಳುತ್ತಿದ್ದಾರೆ. ಆದರೆ ಕಾಂಗ್ರೆಸ್ ಪಕ್ಷ ಮಾತ್ರ ಬಡ ಜನರಿಗೆ ಈ ಬೆಲೆ ಏರಿಕೆಯ ಹೊರೆಯನ್ನು ತಪ್ಪಿಸಲು 5 ಗ್ಯಾರಂಟಿಗಳನ್ನು ನೀಡುವ ಮೂಲಕ ಆಸರೆಯಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು.

ಪಟ್ಟಣದ ಸೇಂದಿ ಡಿಪೊ? ಆವರಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿ ಕಲಬುರಗಿ ಇವರ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ಚಿತ್ತಾಪುರ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ವಿವಿಧ ಇಲಾಖೆಗಳ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ ಹಾಗೂ ಇದ್ಘಾಟನಾ ಸಮಾರಂಭದಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ದೇಶದಲ್ಲಿ ವಿದೇಶಾಂಗ ನೀತಿಯ ವೈಫಲ್ಯದಿಂದಾಗಿ ತಾಯಿಯಂದಿರ ಮೇಲೆ ಅರ್ಥಿಕ ಹೊರೆ ಬಿಳುತ್ತಿದೆ. ಬಿಜೆಪಿ ಅಧಿಕಾರಕ್ಕೆ ಬಂದ್ರೆ ಅಚ್ಚೇದಿನ ಶುರುವಾಗುತ್ತೆ ಎಂದ್ದಿದ್ದರು. ಆದರೆ ಅವರು ಅಧಿಕಾರಕ್ಕೆ ಬಂದಾಗಿನಿಂದ ಅಚ್ಚೆದಿನ್ ಬದಲು ಕೆಟ್ಟ ದಿನಗಳು ಶುರುವಾಗಿದೆ. ಎಲ್.ಪಿ.ಜಿ ದರ 60 ಏರಿಕೆಯಾಗಿದೆ. ಇಂದು ನಾನು ಮಹಿಳೆಯರಿಗೆ ಸಿಹಿ ಸುದ್ದಿ ಕೊಡುವ ಬದಲು ಕಹಿ ಸುದ್ದಿ ಕೊಡಬೇಕಾಗಿದೆ ಎಂದು ಬೇಸರ ವ್ಯಕ್ತ ಪಡಿಸಿದರು. ಬಿಜೆಪಿಯವರು ನಾವು ಜಾರಿಗೆ ತಂದಿರುವ ಪಂಚಗ್ಯಾರಂಟಿಗಳಿಂದ ಸರ್ಕಾರಕ್ಕೆ ಹಾಗೂ ಜನರಿಗೆ ಹೊರೆಯಾಗುತ್ತಿದೆ ಎಂದು ಹೇಳಿ ಗ್ಯಾರಂಟಿಗಳನ್ನು ನಿಲ್ಲಿಸಲು ಹೇಳುತ್ತಿದ್ದಾರೆ. ಅದರೆ ಬಿಜೆಪಿಯವರು ಪೆಟ್ರೋಲ್, ಡಿಸೇಲ್, ತರಕಾರಿ ಸೇರಿದಂತೆ ಪ್ರತಿನಿತ್ಯ ಬಡವರು ಬಳಸುವ ಪ್ರತಿಯೊಂದು ವಸ್ತುಗಳ ಬೆಲೆ ಏರಿಕೆ ಮಾಡುತ್ತಿದ್ದಾರೆ. ಆದರೆ ನಮ್ಮ ಸರ್ಕಾರ ಯಾವ ಜಾತಿ ಧರ್ಮ, ನೋಡದೇ ಸರ್ವರು ಸಮಾನರು ಎಂದು ತಿಳಿದು ಪಂಚ ಗ್ಯಾರಂಟಿಗಳು ಜಾರಿಗೆ ತರುವ ಮೂಲಕ ಆಸರೆಯಾಗಿದ್ದೇವೆ ಎಂದರು.

ಚುನಾವಣೆ ಸಂದರ್ಭದಲ್ಲಿ ಕಾಂಗ್ರೆಸ್ ಸರ್ಕಾರ ರಾಜ್ಯದಲ್ಲಿ ಅಧಿಕಾರಕ್ಕೆ ಬಂದ್ರೇ 5 ಗ್ಯಾರಂಟಿ ಈಡೇರಿಸುತ್ತೇವೆ ಎಂದು ಭರವಸೆ ನೀಡಿದ್ವಿ, ಅದರಂತೆ ನಾವು ಪ್ರಾಮಾಣಿಕವಾಗಿ 5 ಗ್ಯಾರಂಟಿಗಳನ್ನು ಈಡೇರಿಸುತ್ತಿದ್ದೇವೆ. ಕಟ್ಟ ಕಡೆಯ ಜನರು



ಸ್ವಾಭಿಮಾನದ ಜೀವನ ಹಾಗೂ ಆರ್ಥಿಕವಾಗಿ ಸಬಲರಾಗಲು ಅನುಕೂಲವಾಗಿದೆ ಎಂದರು.

ಬಿಜೆಪಿಯವರಿಗೆ ಜನರ ದುಡ್ಡು ಅವರ ಜೆಬಿಗೆ ಹೋಗ್ತಾ ಇಲ್ಲ ಎನ್ನುವ ಏಕೈಕ ಕಾರಣಕ್ಕೆ ಪಂಚಗ್ಯಾರಂಟಿಗಳ ಬಗ್ಗೆ ಅಪ ಪ್ರಚಾರ ಮಾಡಿ, ಗ್ಯಾರಂಟಿಗಳನ್ನು ನಿಲ್ಲಿಸಲು ಹೇಳ್ತಾ ಇದ್ದಾರೆ. ಆದರೆ ರಾಜ್ಯದ ಮುಖ್ಯಮಂತ್ರಿಗಳು ಯಾವುದೇ ಕಾರಣಕ್ಕೆ ಗ್ಯಾರಂಟಿಗಳನ್ನು ನಿಲ್ಲಿಸಲ್ಲ ಜನರ ದುಡ್ಡು ಜನರಿಗೆ ಹೋಗಲಿ ಎಂದು ಕಡಾ ಖಂಡಿತ ಹೇಳಿದ್ದಾರೆ. ಹೀಗಾಗಿ ಯಾರು ಕೂಡ ತಲೆ ಕೆಡಿಸಿಕೊಳ್ಳಬೇಡಿ ಎಂದರು.

ಬಿಜೆಪಿಯವರು ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಹಾಗೂ ಪ್ರಿಯಾಂಕ್ ಖರ್ಗೆ ಮೇಲೆಯೆ ಟಾರ್ಗೆಟ್ ಇಟ್ಟಿದ್ದಾರೆ ಸ್ವಲ್ಪ ಜೋಪಾನ ಎಂದು ಮುಖ್ಯಮಂತ್ರಿಗಳು ನನಗೆ ಹೇಳಿದ್ರು, ಆದರೆ ನಾನು ಅವರಿಗೆ ಹೇಳಿದೆ ಕಲಬುರಗಿ ಹಾಗೂ ಚಿತ್ತಾಪುರದ ಜನರ ಮೇಲೆ ನನಗೆ ಅಪಾರ ಗೌರವಯಿದೆ. ಅವರು ನನ್ನನ್ನು ಯಾವತ್ತು ಕೈ ಬೀಡಲ್ಲ. ಬಿಜೆಪಿಯವರು ಎಷ್ಟೇ ತಿಪ್ಪರಲಾಗ ಹಾಕಿದರೂ ಅವರ ಕನಸು ಯಾವತ್ತಿಗೂ ನನಸು ಆಗಲ್ಲ ಎಂದು ನಾನು ಮುಖ್ಯಮಂತ್ರಿಗಳಿಗೆ ಹೇಳಿದೆ ಎಂದರು.

ಚುನಾವಣೆ ಸಂದರ್ಭದಲ್ಲಿ ನನಗೆ ನಂಬಿ ನಾನು ನಿಮ್ಮ ಮನೆ ಮಗನಾಗಿ ದುಡಿಯುತ್ತೇನೆ ಎಂದು ಕ್ಷೆತ್ರದ ಜನರಿಗೆ ಹೇಳಿದ್ದರಿಂದ ನನ್ನನ್ನು ನಂಬಿ 3 ಬಾರಿ ಗೆಲ್ಲಿಸಿದರು. ಹೀಗಾಗಿಯೇ ನಾನು ಕ್ಷೇತ್ರದ ಜನರಿಗೆ ಕೊಟ್ಟ ಭರವಸೆಯಂತೆ ಪಟ್ಟಣ, ಗ್ರಾಮೀಣ ಪ್ರದೇಶ, ಸಣ್ಣ ಹಳ್ಳಿಗಳಿಗೂ ಕೋಟಿ ಗಟ್ಟಲೇ ಅನುದಾನ ನೀಡಿ ಅಭಿವೃದ್ಧಿ ಪಡಿಸುತ್ತಿದ್ದೇನೆ. ಇಂದು 1069 ಕೋಟಿ ಅನುದಾನದಲ್ಲಿ ಅನೇಕ ಅಭಿವೃದ್ಧಿ ಕೆಲಸಗಳಿಗೆ ಶಂಕುಸ್ಥಾಪನೆ ಹಾಗೂ ಉದ್ಘಾಟನೆ ಮಾಡಲಾಗಿದೆ. ಮುಂದಿನ ದಿನಗಳಲ್ಲಿ ಕ್ಷೇತ್ರದ ಜನರ ಆಶೀರ್ವಾದ ಇದ್ದರೇ ಸಾಕು ಇನ್ನೂ ಕೋಟಿ ಗಟ್ಟಲೇ ಅನುದಾನ ತಂದು ಅಭಿವೃದ್ಧಿ ಪಡಿಸುತ್ತೇನೆ ಎಂದು ಭರವಸೆ ನೀಡಿದರು.

ರಾಜ್ಯ ಸಭಾ ವಿರೋಧ ಪಕ್ಷದ ನಾಯಕರಾದ ಮಲ್ಲಿಕಾರ್ಜುನ ಖರ್ಗೆ ಅವರನ್ನು ಉದ್ದೇಶಿಸಿ ಮಾತನಾಡಿದ ಪ್ರಿಯಾಂಕ್ ಖರ್ಗೆ, ಕಲಬುರಗಿ ಜಿಲ್ಲೆಯ ರೈತರಿಗೆ ಅತಿ ಹೆಚ್ಚಿನ ಪರಿಹಾರ ನೀಡಲಾಗಿದೆ. ಕಳೆದ ಎರಡುವರೆ ವರ್ಷದಲ್ಲಿ 15.50 ಲಕ್ಷ ರೈತರಿಗೆ ಒಟ್ಟು 2590 ಕೋಟಿ ಅನುದಾನವನ್ನು ಪರಿಹಾರದ ರೂಪದಲ್ಲಿ ನೀಡಲಾಗಿದೆ ಎಂದರು.

ಮಾಜಿ ಸಚಿವ ಬಾಬುರಾವ ಚಿಂಚನಸೂರ್, ಮುಖಂಡರಾದ ನಾಗರೆಡ್ಡಿ ಪಾಟೀಲ್, ಭೀಮಣ್ಣ ಸಾಲಿ, ರಮೇಶ ಮರಗೋಳ, ಶಿವಾನಂದ ಪಾಟೀಲ್, ಮುಕ್ತಾರ ಪಟೇಲ್ ಮಾತನಾಡಿದರು. ಜಿಲ್ಲಾಧಿಕಾರಿ ಫೌಜೀಯಾ ತರನ್ನುಮ್, ಸಚಿವರಾದ ಡಾ. ಶರಣಪ್ರಕಾಶ ಪಾಟೀಲ್, ಶರಣಬಸಪ್ಪ ದರ್ಶನಾಪುರ, ಶಾಸಕರಾದ ಕನೀಜ್ ಫಾತೀಮಾ, ಎಂ.ವೈ ಪಾಟೀಲ್, ಅಲಂಪ್ರಪ್ರಭು ಪಾಟೀಲ್, ತಿಪ್ಪಣಪ್ಪ ಕಮಕನೂರ್, ಜಗದೇವ ಗುತ್ತೇದಾರ, ಅರುಣಕುಮಾರ್ ಪಾಟೀಲ್, ಸೈಯದ್ ಮಹೇಮೂದ್ ಸಾಹೇಬ್, ಚನ್ನಾರೆಡ್ಡಿ, ದೆವೆಂದ್ರಪ್ಪ ಮರತೂರ, ಅಬ್ದುಲ್ ರಶೀದ್, ಪ್ರವೀಣ ಹರವಾಳ, ರೇವುನಾಯಕ ಬೆಳಮಗಿ, ಸುನೀಲ್ ದೊಡ್ಮನಿ, ಶಿವರುದ್ರ ಭೀಣಿ, ಮನ್ಸೂರ್ ಪಟೇಲ್, ಯಲ್ಲಾಲಿಂಗ ಪೂಜಾರಿ, ಬಸವರಾಜ ಪೂಜಾರಿ, ಅಜೀಜ್ ಸೇಠ್, ಶ್ರೀನಿವಾಸ ಸಗರ್, ಅರವಿಂದ ಚವ್ಹಾಣ, ಜಯಪ್ರಕಾಶ ಕಮಕನೂರ್, ವೀರಣ್ಣಗೌಡ, ಶೇಖ ಬಬ್ಲು, ದೇವು ಯಾಬಾಳ, ಎಂ.ಎ ನಯೀಮ್, ರಫೀಕ್ ಲಿಂಕ್, ಶರಣು ಡೋಣಗಾಂವ, ಸಂಜು ಬುಳಕರ್, ಜಗದೀಶ ಚವ್ಹಾಣ, ವಿನ್ನು ಕುಮಾರ್ ಸೇರಿದಂತೆ ಅನೇಕ ಮುಖಂಡರು, ಕಾರ್ಯಕರ್ತರು, ಅಭಿಮಾನಿಗಳು, ಜಿಲ್ಲಾ ಹಾಗೂ ತಾಲೂಕು ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿಗಳು ಇದ್ದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭಂವರ್'ಸಿಂಗ್ ಮೀನಾ ಸ್ವಾಗತಿಸಿದರು. ಸೇಡಂ ಎ.ಸಿ ಪ್ರಭು ರೆಡ್ಡಿ ವಂದಿಸಿದರು.

ಇದೇ ವೇಳೆ ಪುರಸಭೆ ಚಿತ್ತಾಪುರ, ಪುರಸಭೆ ವಾಡಿ, ಕಾರ್ಮಿಕ ಇಲಾಖೆ, ಪಶು ಪಾಲನಾ ಇಲಾಖೆ, ಆರೋಗ್ಯ ಇಲಾಖೆ ಸೇರಿದಂತೆ ತಾಲೂಕಿನ ವಿವಿಧ ಫಲಾನುಭವಿಗಳಿಗೆ ಹಕ್ಕು ಪತ್ರ, ಸೌಕರ್ಯಗಳನ್ನು ವಿತರಣೆ ಮಾಡಲಾಯಿತು.

## ಭಕ್ತಿ-ಭಾವದ ನಡುವೆ ಶ್ರೀ ಬೀರಲಿಂಗೇಶ್ವರ ಮೂರ್ತಿ ಪ್ರಾಣ ಪ್ರತಿಷ್ಠಾಪನೆ; ನೂತನ ಭವನಗಳ ಲೋಕಾರ್ಪಣೆ



**ಬೀದರ್,ಮಾ.9** ನಗರದ ಕುಂಬಾರವಾಡಾ ಮುಖ್ಯ ರಸ್ತೆಯಲ್ಲಿ ನೂತನವಾಗಿ ನಿರ್ಮಿಸಲಾದ ಮಂದಿರದಲ್ಲಿ ಮೂರು ದಿನಗಳ ಕಾಲ ನಡೆದ ಶ್ರೀ ಬೀರಲಿಂಗೇಶ್ವರ ದೇವರ ಮೂರ್ತಿ ಪ್ರಾಣ ಪ್ರತಿಷ್ಠಾಪನಾ ಮಹೋತ್ಸವವು ರವಿವಾರ ಅತ್ಯಂತ ವೈಭವದಿಂದ ಸಂಪನ್ನಗೊಂಡಿತು.

ಮಹೋತ್ಸವದ ಕೊನೆಯ ದಿನವಾದ ಭಾನುವಾರ ಬೆಳಿಗ್ಗೆ ಶ್ರೀ ಬೀರಲಿಂಗೇಶ್ವರ, ಶ್ರೀ ಮಾಳಿಂಗರಾಯ ಹಾಗೂ ಮಹಾತ್ಮ ಬೊಮ್ಮಗೊಂಡೇಶ್ವರ ಮೂರ್ತಿಗಳ ಪ್ರಾಣ ಪ್ರತಿಷ್ಠಾಪನೆ ನೆರವೇರಿತು. ನಂತರ ಮಂದಿರದ ಶಿಖರಕ್ಕೆ ಭವ್ಯ ಕಳಸಾರೋಹಣ ಮಾಡುವ ಮೂಲಕ ಧಾರ್ಮಿಕ ವಿಧಿವಿಧಾನಗಳನ್ನು ಪೂರೈಸಲಾಯಿತು.

ಮಾಜಿ ಸಚಿವ ಬಂಡೆಪ್ಪ ಖಾಶೇಂಪುರ ಹಾಗೂ ವಿಧಾನ ಪರಿಷತ್ ಮಾಜಿ ಸಭಾಪತಿ ರಘುನಾಥರಾವ್ ಮಲ್ಕಾಪುರೆ ಅವರು ನೂತನವಾಗಿ ನಿರ್ಮಿಸಲಾದ ಸಭಾ ಭವನ ಮತ್ತು ಈರಕಾರ ಭವನಗಳನ್ನು ಉದ್ಘಾಟಿಸಿದರು. ಇದಕ್ಕೆ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಜಿಲ್ಲಾಧ್ಯಕ್ಷ ಅಮೃತರಾವ್ ಚಿಮಕೋಡೆ ಕೈಜೋಡಿಸಿದರು.

2004ರಲ್ಲಿ ತಾವು ಮೊದಲ ಬಾರಿಗೆ ಶಾಸಕರಾಗಿ ಆಯ್ಕೆಯಾದಾಗ ಆರಂಭವಾದ ಈ ಅಭಿವೃದ್ಧಿ ಕಾರ್ಯ ಇಂದು ಭವ್ಯ ರೂಪ ಪಡೆದಿದೆ. ಸರ್ಕಾರದಿಂದ ಮಂಜೂರಾದ 20 ಲಕ್ಷ ರೂ. ಅನುದಾನ ಮತ್ತು ಭಕ್ತರು ನೀಡಿದ ದೇಣಿಗೆಯನ್ನು ಸಮಿತಿಯವರು ಅತ್ಯಂತ ಪ್ರಾಮಾಣಿಕವಾಗಿ ಬಳಸಿದ್ದಾರೆ ಎಂದು ಬಂಡೆಪ್ಪ ಖಾಶೇಂಪುರ ಮೆಚ್ಚುಗೆ ವ್ಯಕ್ತಪಡಿಸಿದರು.

"ಬಂದ ಪ್ರತಿಯೊಂದು ಪೈಸೆಗೂ ನ್ಯಾಯ ಒದಗಿಸಿ, ಅತ್ಯಂತ ಪಾರದರ್ಶಕವಾಗಿ ಕೆಲಸ ಮಾಡಲಾಗಿದೆ. ನಮ್ಮಲ್ಲಿ ಎಷ್ಟು ಹಾಸಿಗೆ ಇದೆಯೋ ಅಷ್ಟೇ ಕಾಲು ಚಾಚೋಣ ಎಂಬ ಮಿತವ್ಯಯದ ತತ್ವದಡಿ ಸುಂದರವಾದ ಗುಡಿ ಮತ್ತು ಸಭಾಂಗಣ ನಿರ್ಮಿಸಿರುವುದು ಶ್ಲಾಘನೀಯ," ಎಂದರು.

ವಿಧಾನ ಪರಿಷತ್ ಮಾಜಿ ಸಭಾಪತಿ ರಘುನಾಥರಾವ್ ಮಲ್ಕಾಪುರೆ ಮಾತನಾಡಿ, ದೇವಸ್ಥಾನದಲ್ಲಿ ನಿರಂತರ ಪೂಜೆ ನಡೆಯಲು ಭಕ್ತರಿಂದ ದೇಣಿಗೆ ಪಡೆದು ಬ್ಯಾಂಕ್‌ನಲ್ಲಿ ಶಾಶ್ವತ ಠೇವಣಿ ಇಡುವಂತೆ ಸಲಹೆ ನೀಡಿದರು. ಪ್ರತಿ ಭಾನುವಾರ ಭಜನೆ ಮತ್ತು ಸತ್ಸಂಗಗಳ ಮೂಲಕ ಮುಂದಿನ ಪೀಳಿಗೆಗೆ ಸಂಸ್ಕೃತಿಯನ್ನು ಧಾರೆ ಎರೆಯಬೇಕು ಎಂದು ಅವರು ತಿಳಿಸಿದರು.

ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಜಿಲ್ಲಾಧ್ಯಕ್ಷ ಅಮೃತರಾವ್ ಚಿಮಕೋಡೆ ಅವರು ಮಾತನಾಡಿ, "ಹೆಣ್ಣೊಂದು ಕಲಿತರೆ ಶಾಲೆಯೊಂದು ತೆರೆದಂತೆ ಎಂಬ ಮಾತು ಅಕ್ಷರಶಃ ಸತ್ಯ. ತಾಯಿಯ ಋಣ ಮತ್ತು ಶಿಕ್ಷಣದ ಮಹತ್ವವನ್ನು ಪ್ರತಿಯೊಬ್ಬರೂ ಅರಿಯಬೇಕು," ಎಂದು ತಿಳಿಸಿದರು. ಬಸವಣ್ಣ ಮತ್ತು ಕನಕದಾಸರ ತತ್ವಗಳಂತೆ ಸಮಾಜದಲ್ಲಿ ಸಮಾನತೆ ಕಾಣುವಂತೆ ಅವರು ಕರೆ ನೀಡಿದರು.

ಶ್ರೀ ಬೀರಲಿಂಗೇಶ್ವರ ದೇವಸ್ಥಾನದ ಸೇವಾ ಸಮಿತಿ ಅಧ್ಯಕ್ಷ ಪಿ.ಎಸ್. ಇಟಕಂಪಳ್ಳಿ ಮಾತನಾಡಿ, ಸಮಿತಿಯಿಂದ ಅಹಲ್ಯಾಬಾಯಿ ಹೋಳ್ಕರ್ ಮಹಿಳಾ ಸ್ವಸಹಾಯ ಸಂಘ ಸೇರಿದಂತೆ ವಿವಿಧ ಸಂಘಗಳ ಮೂಲಕ ಮಹಿಳೆಯರ ಆರ್ಥಿಕ ಸ್ವಾವಲಂಬನೆಗೆ ಒತ್ತು ನೀಡಲಾಗುತ್ತಿದೆ. ಈಗಾಗಲೇ ಸುಮಾರು 10.25 ಲಕ್ಷ ರೂ. ನಿಧಿಯನ್ನು ಸಂಗ್ರಹಿಸಿ ಪಾರದರ್ಶಕವಾಗಿ ಅಭಿವೃದ್ಧಿ ಕೆಲಸಗಳಿಗೆ ಬಳಸಲಾಗುತ್ತಿದೆ ಎಂದು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಬಸವಕಲ್ಯಾಣ ಗೌರನ ಶ್ರೀ ಬೀರಲಿಂಗೇಶ್ವರ ಮಠದ ಶ್ರೀ ಬೀರಪ್ಪ ಮುತ್ಯ, ಮಾಜಿ ಜಿಲ್ಲಾ ಪಂಚಾಯತ ಅಧ್ಯಕ್ಷ ಭಾರತಿಬಾಯಿ ಶೇರಿಕಾರ, ಅಖಿಲ ಭಾರತ ಗೊಂಡ ಆದಿವಾಸಿ ಸಂಘದ ಕರ್ನಾಟಕ ಘಟಕದ ಪ್ರಧಾನ ಕಾರ್ಯದರ್ಶಿ ಮಾಳಪ್ಪ ಅಡಸಾರೆ, ಮಾಜಿ ಜಿಲ್ಲಾ ಪಂಚಾಯತ ಅಧ್ಯಕ್ಷ ಬಾಬು ಖಾಶೇಂಪುರ, ಮಾಜಿ ಗ್ರಾಮ ಪಂಚಾಯತ ಅಧ್ಯಕ್ಷ ಕಾಮಶೆಟ್ಟಿ ಹಳಿಯಂಬರ, ಮುಖಂಡರಾದ ಈಶ್ವರ ಮಲ್ಕಾಪುರ, ಭೀಮರಾವ್ ಜನಾಪೇಟ್, ಸಂತೋಷ ಜೋಳದಾಪಕೆ, ಬಾಬುರಾವ ಸಂಗೊಳಗಿ, ಅಶೋಕ್ ಮುದಾಳೆ, ಗುರುನಾಥ ಮುದಾಳೆ, ಶ್ರೀಪತಿ ಮೇತ್ರೆ, ವಿಠಲರಾವ ಪೀರಗೊಂಡ, ರಘುನಾಥ ಭುರೆ, ಕಲ್ಯಾಣರಾವ ಅಡಸಾರೆ, ಜಗನ್ನಾಥ ಜಮಗಿ, ಧನ್ನರಾಜ್ ಗುಡಮೆ, ಲೋಕೇಶ್ ಮೇತ್ರೆ, ಸಂಜು ಡೊಳ್ಳೆ, ಬಾಬುರಾವ್ ಸೇಳಕೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಮೋದಿ ದೇಶದ ಮಾರ್ಯಾದೆ ಹಾಳು ಮಾಡುತ್ತಿದ್ದಾರೆ: ಮಲ್ಲಿಕಾರ್ಜುನ ಖರ್ಗೆ ಕಟುಟೀಕೆ



**ಚಿತ್ತಾಪುರ,ಮಾ.9-**ಪ್ರಧಾನಿ ನರೇಂದ್ರ ಮೋದಿ ತಮ್ಮ ವಿದೇಶಾಂಗ ನೀತಿಯಿಂದಾಗಿ ನಮ್ಮ ದೇಶವನ್ನು ಅಂತರಾಷ್ಟ್ರೀಯ ಮಟ್ಟದಲ್ಲಿ ಹಾಳುಮಾಡುತ್ತಿದ್ದಾರೆ ಎಂದು ರಾಜ್ಯಸಭೆ ವಿರೋಧ ಪಕ್ಷದ ನಾಯಕ ಹಾಗೂ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಟೀಕಿಸಿದರು.

ಚಿತ್ತಾಪುರ ಪಟ್ಟಣದಲ್ಲಿ ರೂ 1069 ಕೋಟಿ ವೆಚ್ಚದ ಕಾಮಗಾರಿಗಳು ಅಡಿಗಲ್ಲು ಹಾಗೂ ಉದ್ಘಾಟನೆ ನೆರವೇರಿಸಿ ಅವರು ಮಾತನಾಡುತ್ತಿದ್ದರು." ಟ್ರಂಪ್ ಒಬ್ಬ ಡಿಕ್ಟೇಟರ್, ಮೋದಿ ಅವರ ಗುಲಾಮ ಎಂದು ಕಟು ಟೀಕಿಸಿದ ಖರ್ಗೆ, ರಷ್ಯಾದಿಂದ ಈಗ ಒಂದು ತಿಂಗಳ ಮಾತ್ರ ತೈಲ ಖರೀದಿಗೆ ಅಮೇರಿಕ ಅನುಮತಿ ನೀಡಿದೆ. ಅಮೇರಿಕದವರು ಹೇಳಿದಂತೆ ಮೋದಿ ಕೇಳುತ್ತಿದ್ದಾರೆ. ಟ್ರಂಪ್ ಜೊತೆ ಸ್ನೇಹ ಮಾಡಿಕೊಂಡು ನಮ್ಮ ದೇಶವನ್ನು ಗಿರಿವಿ ಇಟ್ಟಿದ್ದಾರೆ" ಎಂದು ಖರ್ಗೆ ಆಕ್ರೋಶ ವ್ಯಕ್ತಪಡಿಸಿದರು.ಮಧ್ಯಪ್ರಾಚ್ಯದಲ್ಲಿ ನಡೆಯುತ್ತಿರುವ ಯುದ್ದದ ಬಗ್ಗೆ ಪ್ರಸ್ತಾಪಿಸಿದ ಮಲ್ಲಿಕಾರ್ಜುನ ಖರ್ಗೆ, ಜವಾಹರ್ ಲಾಲ್ ನೆಹರು ಪ್ರಧಾನಿಯಾಗಿದ್ದಾಗ ನಾನ್ ಅಲೈನ್ ಮೆಂಟ್ ಒಪ್ಪಂದ ಮಾಡಿಕೊಂಡಿದ್ದರಿಂದ ಅದು ವಿಶ್ವಶಾಂತಿಗೆ ಕಾರಣವಾಗಿತ್ತು. ಆದರೆ, ಮೋದಿ ಈಗ ಮಾಡುತ್ತಿರುವುದೇನು ? ಮೋದಿ ಇಸ್ರೇಲ್‌ಗೆ ಹೋಗಿ ಬಂದ ನಂತರ ಅದು ಇರಾನ್ ಮೇಲೆ ಬಾಂಬ್ ಹಾಕಿತು. ದೇಶದ ಮಖ್ಯಸ್ಥ ಖೋಮೇನಿಯನ್ನು ಅಮೆರಿಕ ದವರು ಹತ್ಯೆ ಮಾಡಿದರು. ಒಂದು ದೇಶದ ಮುಖ್ಯಸ್ಥನನ್ನು ಹತ್ಯೆ ಮಾಡಿದರೆ ಆ ದೇಶ ಶಾಂತಿಯಿಂದ ಇರುತ್ತದಯೇ ? ಇದು ವಿಶ್ವ ಶಾಂತಿಯಿಂದ ಇರಲು ಸಾಧ್ಯವಾಗುತ್ತದೆಯಾ ? ಎಂದು ಖರ್ಗೆ ಪ್ರಶ್ನಿಸಿದರು."ಭಾರತ ದೇಶದ 65% ರೈತರು ಕೃಷಿ ಅವಲಂಬಿತರಾಗಿದ್ದರೆ ಅಮೇರಿಕಾದದಲ್ಲಿ 3% ಅವಲಂವಿತರಾಗಿದ್ದಾರೆ. ನಮ್ಮ ದೇಶದ ಉತ್ಪನ್ನಗಳಿಗೆ ಅಮೇರಿಕಾದಲ್ಲಿ ಟ್ಯಾಕ್ಸ್ ಇಲ್ಲ. ಆದರೆ, ಅಮೇರಿಕಾದ ಉತ್ಪನ್ನಗಳ ಮೇಲೆ ಮನಬಂದಂತೆ ಟ್ಯಾಕ್ಸ್ ಹಾಕಲಾಗುತ್ತಿದೆ. ಟ್ರಂಪ್ ನನ್ನ ಸ್ನೇಹಿತ ಎನ್ನುತ್ತಾರೆ. ಆದರೆ, ರಷ್ಯಾದಿಂದ ತೈಲ ಖರೀದಿ ಮಾಡದರೆ ನಿಮ್ಮ ಮೇಲೆ ಟ್ಯಾಕ್ಸ್ ಹಾಕುತ್ತೇನೆ ಟ್ರಂಪ್ ಹೇಳುತ್ತಾರೆ. ಟ್ರಂಪ್ ಜೊತೆ ದಿನಾಲೂ ಮಾತನಾಡುತ್ತಿರುವುದಾಗಿ ಮೋದಿ ಹೇಳುತ್ತಾರೆ. ಟ್ಯಾಕ್ಸ್ ಹಾಕುವ ಬಗ್ಗೆನೆ ಮಾತನಾಡುತ್ತಾರ ? ಎಪ್ಸ್ಟಿನ್ ಫೈನಲ್ಲಿ ಯಾರು ಯಾರು ಎಲ್ಲಿ ಹೋಗಿದ್ದರು ಎನ್ನುವ ಮಾಹಿತಿ ಇದೆ ಎನ್ನಲಾಗುತ್ತಿದೆ. ಅದನ್ನು ಇಟ್ಟುಕೊಂಡೆ ಟ್ರಂಪ್ ಮೋದಿಗೆ ಹೆದರಿಸುತ್ತಿದ್ದಾರೆ" ಎಂದರು.ಕಾಂಗ್ರೆಸ್ ಅಧಿಕಾರದ 75 ವರ್ಷ ಆದರೂ ಕೂಡಾ ನಮ್ಮ ದೇಶದ ತಂಟೆಗೆ ಯಾರೂ ಬಂದಿರಲಿಲ್ಲ. ಪಾಕಿಸ್ತಾನವನ್ನು ಒಡೆದು ಎರಡು ಭಾಗ ಮಾಡಿದರು. ಅವರಿಗೆ ಇದ್ದಂತ ಧೈರ್ಯ ನಿಮಗೇಕಿಲ್ಲ ? ಎಂದು ಪ್ರಶ್ನಿಸಿದ ಮಲ್ಲಿಕಾರ್ಜುನ ಖರ್ಗೆ, ರಾಜ್ಯ ಕಾಂಗ್ರೆಸ್ ಸರ್ಕಾರವನ್ನು ಟೀಕಿಸುತ್ತಿರುವ ಬಿಜೆಪಿ ನಾಯಕರ ಮೇಲೆ ಹರಿಹಾಯ್ದರು."ಬಿಜೆಪಿಯರವರಿಗಂತೂ ಕೆಲಸನೇ ಇಲ್ಲ. ಸೋನಿಯಾಗೆ, ರಾಹುಲ್‌ಗೆ, ನನಗೆ, ಪ್ರಿಯಾಂಕ್‌ಗೆ , ಸಿದ್ದರಾಮಯ್ಯಗೆ ಹಾಗೂ ಶಿವಕುಮಾರ್‌ಗೆ ಬೈಯ್ಯುವುದೇ ಕೆಲಸವಾಗಿದೆ. ನಮ್ಮ ಸರ್ಕಾರ ಇದ್ದಾಗ ಮಾಡಿರುವ ಕೆಲಸಗಳ ಬಗ್ಗೆ ಎಲ್ಲರಿಗೂ ಗೊತ್ತಿದೆ. ಗದಗ ವಾಡಿ ರೈಲ್ವೆ ಲೈನ್, ರಸ್ತೆಗಳು, ಹೈವೈಗಳು ಮಾಡುದ್ದು ನಾವೇ ಹೊರತು ನೀವಲ್ಲ" ಎಂದು ಬಿಜೆಪಿ ವಿರುದ್ದ ಟೀಕಿಸಿದರು." ಆರ್ಟಿಕಲ್ 371 ಜೆ ಜಾರಿಗೆ ತಂದಿದ್ದು ನಾವು. ನಮ್ಮ ಬೇಡಿಕೆಗೆ ಅಂದಿನ ಗೃಹ ಸಚಿವ ಅಡ್ವಾಣಿ ಸ್ಪಂದಿಸಲಿಲ್ಲ ಎಂದು ಅಂದಿನ ಬಿಜೆಪಿಯ ಪ್ರತಿರೋಧವನ್ನು ನೆನಪಿಸಿಕೊಂಡ ಖರ್ಗೆ, ನಾನು ಅಂದಿನ ಸಂದರ್ಭದಲ್ಲಿ ನಮ್ಮ ಪರವಾಗಿರಲು 130 ಜನ ಎಂ.ಪಿಗಳಿಗೆ ಹೇಗೆ ಮನವೊಲಿಸಿದ್ದೇನೆ ಅದು ನನಗೆ ಮಾತ್ರ ಗೊತ್ತು. ಆರ್ಟಿಕಲ್ 371 ಎ ನನಗೆ, ನನ್ನ ಮಕ್ಕಳಿಗೆ ಹಾಗೂ ಮೊಮ್ಮಕ್ಕಳಿಗೆ ಅನುಕೂಲವಾಗಲ್ಲ. ಅದು ಅನುಕೂಲವಾಗುವುದು ಜನಸಾಮಾನ್ಯರಿಗೆ. ಇಂದು ಮೆಟಿಕಲ್, ಇಂಜಿನಿಯರಿಂಗ್ ಸೀಟು ಪಡೆದುಕೊಳ್ಳಲು ಅನುಕೂಲವಾಗಿದೆ" ಎಂದರು.ಕಲಬುರಗಿ ಗೆ ವಿಮಾನ ನಿಲ್ದಾಣ ಮಾಡಲು ಶ್ರೀನಿವಾಸ ಸರಡಗಿ ಗ್ರಾಮದ ಜನರು 1,000 ಎಕರೆ ಜಮೀನು ಕೊಟ್ಟಿದ್ದಾರೆ. ಅವರಿಗೆ ಇಲ್ಲಿಂದಲೆ ನಾನು ನಮಸ್ಕಾರ ಮಾಡುತ್ತೇನೆ. ವಿಮಾನ ನಿಲ್ದಾಣವನ್ನು ಖರ್ಗೆ ಜಾಸ್ತಿ ಓಡಾಡುತ್ತಾರೆ ಎಂದು ಬಂದ್ ಮಾಡಲಾಗಿದೆ. ನಾನು ದಿನಾಲು ಬರುತ್ತೇನಾ ?" ಎಂದು ಪ್ರಶ್ನಿಸಿದರು." ನಮ್ಮ ದೇಶದ ಯುವಕರ ಭವಿಷ್ಯ ಉಜ್ವಲವಾಗಬೇಕಾದರೆ ಯೋಜನೆಗಳು ಬರಬೇಕು ಹೇಳಿದ ಖರ್ಗೆ, ಯುವಕರಲ್ಲಿ ಜಗಳ ಹಚ್ಚುವುದು ಹಾಗೂ ದ್ವೇಷ ಹರಡುವುದೇ ಇವರ ಕೆಲಸವಾಗಿದೆ. ಶ್ರೀಮಂತರು ಹೇಗೋ ಬಚಾವಾಗುತ್ತಾರೆ ಬಡವರು ಎಲ್ಲಿ ಹೋಗಬೇಕು. ? ಬಿಜೆಪಿ ಹಾಗೂ ಆರ್ ಎಸ್ ಎಸ್ ನ ಕೆಲವರು ಬ್ರಿಟಿಷ್ ರ ಕೆಳಗೆ ಕೆಲಸ ಮಾಡುತ್ತಿದ್ದವರು. ಅವರು ದೇಶದ ಸ್ವಾತಂತ್ರ್ಯಕ್ಕಾಗಿ ಹನಿ ರಕ್ತ ಹರಿಸಿಲ್ಲ. ನಾನು ಯಾರಿಗೂ ಬೈಯುತ್ತಿಲ್ಲ. ನಮ್ಮನ್ನು ಟೀಕಿಸುವವರು ಬಿಜೆಪಿ ಹಾಗೂ ಆರ್ ಎಸ್ ಎಸ್ ನವರು. ಅವರ ಬಗ್ಗೆ ನೀವು ಎಚ್ಚರದಿಂದ ಇರಬೇಕು ಅವರ ಮಾತಿಗೆ ಮರುಳಾಗಬಾರದು" ಎಂದರು.ಚಿತ್ತಾಪುರದ ಒಬ್ಬ ಶಾಸಕ ಇಡೀ ದೇಶದ ಜನರ ಸಮಸ್ಯೆ ಬಗ್ಗೆ ಧ್ವನಿ ಎತ್ತಿ ಮಾತನಾಡುತ್ತಿರುವುದು ನೋಡಿದರೆ ಹೆಮ್ಮೆ ಎನಿಸುತ್ತದೆ ಎಂದು ಪ್ರಿಯಾಂಕ್ ಖರ್ಗೆ ಅವರ ಬಗ್ಗೆ ಕೊಂಡಾಡಿದರು.ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಶಿವಕುಮಾರ ಚೆನ್ನಾಗಿ ಕೆಲಸ ಮಾಡುತ್ತಿದ್ದಾರೆ. ಅವರಿಗೆ ನೀವು ಸದಾ ಬೆಂಬಲ ನೀಡಬೇಕು ಎಂದು ಮನವಿ ಮಾಡಿದ ಮಲ್ಲಿಕಾರ್ಜು ನ ಖರ್ಗೆ, ಕಾಂಗ್ರೆಸ್‌ಗೆ ಇನ್ನು ಇಪ್ಪತ್ತು ಸೀಟ್ ಬಂದಿದ್ದರೆ ಮೋದಿ ಅಧಿಕಾರಕ್ಕೆ ಬರುತ್ತಿರಲಿಲ್ಲ. ನಮ್ಮ ನಿರೀಕ್ಷೆಯಂತೆ ಸೀಟು ಬರಲಿಲ್ಲ ಅದು ನಮ್ಮ ದುರ್ದೈವ. ನಮ್ಮ ಸೋಲನ್ನು ಬಿಜೆಪಿಯವರು ಟೀಕಿಸು ತ್ತಾರೆ. ಆದರೆ, ನಾವು ಜನರ ಪ್ರೀತಿ ವಿಶ್ವಾಸದಿಂದ ಮುಂದುವರೆಯುತ್ತೇವೆ ಎಂದರು.

**Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.**
**Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE**